# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 164 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 02–01–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00

Volume - 01 Issue - 164 | Title- Code: KARKAN 28269 | Chitradurga | Date: 12-01-2024 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಕ್ಲಿನಿಕ್‌ಗಳ ಮೇಲೆ ಅಧಿಕಾರಿಗಳು ದಾಳಿ: ಆಯುಷ್ ವೈದ್ಯರುಗಳ ಪ್ರತಿಭಟನೆ 2

ನಗರಸಭೆಯ ಪೌರಕಾರ್ಮಿಕರಿಗೆ 4 ಲಕ್ಷವೆಚ್ಚದಲ್ಲಿ ಮನೆ ಸಾಮಾಗ್ರಿ ವಿತರಣೆ 3

ಪ್ರತಿಯೊಂದು ಮನೆಮನೆಗೂ ಸಹ ಸ್ಕೌಟ್ ಅಂಡ್ ಗೈಡ್ಸ್ ತಲುಪಬೇಕು: ಸಿಂಧ್ಯಾ 4



ಸುದ್ದಿ, ಜಾಹಿರಾತಿಗೆ 9686622252



# ಚಳ್ಳಕೆರೆ ಕ್ಷೇತ್ರದ ಅಭಿವೃದ್ಧಿಗೆ ಸಹಕಾರ ನೀಡಿ, ನಿಗಮ ಮಂಡಳಿ ಬೇಡ: ಸಿಎಂಗೆ ಶಾಸಕ ರಘುಮೂರ್ತಿ ಪತ್ರ

» **ಚಿತ್ರದುರ್ಗ**

ನಿಗಮ ಮಂಡಳಿ ಅಧ್ಯಕ್ಷ ಸ್ಥಾನಕ್ಕೆ ನನ್ನನ್ನು ಪರಿಗಣಿಸದಂತೆ ಚಳ್ಳಕೆರೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ.

ಕಾಂಗ್ರೆಸ್ ಸರ್ಕಾರದಲ್ಲಿ ನಿಗಮ ಮಂಡಳಿ ಪಡೆಯಲು ಪೈಪೋಟಿ ನಡೆಯುತ್ತಿರುವ ನಡುವೆ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅವರು ನಿಗಮ ಮಂಡಳಿಗಳ ಅಧ್ಯಕ್ಷ ಸ್ಥಾನಕ್ಕೆ ಮಾಡುವ ಸಂದರ್ಭದಲ್ಲಿ ನನ್ನನ್ನು ಪರಿಗಣಿಸಬೇಡಿ ಎಂದು ಪತ್ರ ಬರೆದಿದ್ದು ಪತ್ರದಲ್ಲಿ

ಚಳ್ಳಕೆರೆ ವಿಧಾನ ಸಭಾ ಕ್ಷೇತ್ರದಲ್ಲಿ ರಾಷ್ಟ್ರೀಯ ಕಾಂಗ್ರೆಸ್ ಪಕ್ಷವು ಮೂರು ಬಾರಿ ಚುನಾವಣೆಯಲ್ಲಿ ಸ್ಪರ್ಧಿಸಲು ನನಗೆ ಅವಕಾಶ ಕಲ್ಪಿಸಿದ್ದು ಕ್ಷೇತ್ರದ ಮತದಾರರು ನಿರಂತರವಾಗಿ 2013, 2018,ಮತ್ತು 2023ರ ಚುನಾವಣೆಯಲ್ಲಿ ನನ್ನನ್ನು ಅಶೀರ್ವದಿಸಿರುತ್ತಾರೆ. ಇದಕ್ಕೆ



T. RAGHUMURTHY B.E. Civil
MLA
Challakere Constituency (Part of Chitradurga Taluk)
Chitradurga Dist.
LH Block-1, Room No. 305-306
Mobile : 094498 02349 / 96114 62349

ಟಿ.ರಘುಮೂರ್ತಿ
ಶಾಸಕರು

Ref. No.: MLA/CLK/
Date 10-1-2024

ಸನ್ಮಾನ್ಯ ಶ್ರೀ ಸಿದ್ದರಾಮಯ್ಯ ರವರು,
ಮಾನ್ಯ ಮುಖ್ಯ ಮಂತ್ರಿಗಳು,
ಕರ್ನಾಟಕ ಸರ್ಕಾರ, ವಿಧಾನಸೌಧ,
ಬೆಂಗಳೂರು.

ಗೌರವಾನ್ವಿತರೆ,

ವಿಷಯ: ಕರ್ನಾಟಕ ಸರ್ಕಾರದ ನಿಗಮ ಮಂಡಳಿಗಳ ಅಧ್ಯಕ್ಷರ ನೇಮಕಾತಿಯಲ್ಲಿ ನನ್ನನ್ನು ಪರಿಗಣಿಸದಂತೆ ಕುರಿತು.

ಸಂಬಂದಿಸಿದಂತೆ ತಮಗೂ ಹಾಗೂ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಎಲ್ಲಾ ಹಂತದ ವರಿಷ್ಠರಿಗೂ, ಮುಖಂಡರಿಗೂ ಕಾರ್ಯಕರ್ತರಿಗೂ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಜೊತೆಗೆ ಪಕ್ಷಕ್ಕೆ ಎಂದಿಗೂ ಸಹ ಋಣಿಯಾಗಿರುತ್ತೇನೆ.ಪ್ರಸ್ತುತ ನಿಗಮ ಮಂಡಳಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಪ್ರಕ್ರಿಯೆಯಲ್ಲಿ ಒಂದು ವೇಳೆ ನನ್ನನ್ನು ಪರಿಗಣಿಸುವ ಸಂಭವ ಏನಾದರು ಇದ್ದಲ್ಲಿ ಅನ್ಯಾತಾ ಭಾವಿಸದೆ ನನ್ನನ್ನು ಅಧ್ಯಕ್ಷ ಸ್ಥಾನಕ್ಕೆ ಪರಿಗಣಿಸದಂತೆ ತಮ್ಮಲ್ಲಿ ವಿನಂತಿಸುತ್ತೇನೆ.

ಕಾಂಗ್ರೆಸ್ ಪಕ್ಷಕ್ಕೆ ನಾನು ಆರಂಭದಿಂದಲೂ ಇದುವರವಿಗೂ ಯಾವುದೇ ಸಂದರ್ಭದಲ್ಲಿ ಪಕ್ಷಕ್ಕಾಗಲಿ, ವರಿಷ್ಠರಿಗಾಗಲಿ ಹಾಗೂ ಮತದಾರರಿಗಾಗಲಿ ಮುಜ ಗರವಾಗದೆ ಇರುವ ರೀತಿಯಲ್ಲಿ ನೆಡದುಕೊಳ್ಳಲು ಪ್ರಯತ್ನಿಸಿ ರುತ್ತೇನೆ. ಎಂದು ಭಾವಿಸುತ್ತಾ ಇನ್ನೂ ಮುಂದೆಯು ಸಹ ಈ ಪರಂಪರೆಯನ್ನು ಮುಂದುವರೆಸುತ್ತೇನೆಂದು ತಿಳಿಸುತ್ತಾ, ನನ್ನ ಮತ ಕ್ಷೇತ್ರ ಚಳ್ಳಕೆರೆ ಸಮಗ್ರ ಅಭಿವೃದ್ಧಿಗೆ ಸರ್ಕಾರದಿಂದ ಸಹಕಾರವನ್ನು ನಿರೀಕ್ಷಿಸುತ್ತೇನೆ ಎಂದು ಸಿಎಂ ಬರೆದ ಪತ್ರದಲ್ಲಿ ತಿಳಿಸಿದ್ದಾರೆ.



# ಸಾರ್ವಜನಿಕ ಜೀವನದಲ್ಲಿ ಮೇಲ್ಪಂಕ್ತಿ ಹಾಕಿಕೊಟ್ಟವರು ಶಾಸ್ತ್ರಿ: ಸಿದ್ದರಾಮಯ್ಯ

» **ಬೆಂಗಳೂರು**

ರೈಲ್ವೆ ದುರಂತವಾದಾಗ ಲಾಲ್ ಬಹದ್ದೂರ್ ಶಾಸ್ತ್ರಿ ಅವರು ರಾಜೀನಾಮೆ ನೀಡಿ ಸಾರ್ವಜನಿಕ ಜೀವನದಲ್ಲಿ ಮೇಲ್ಪಂಕ್ತಿಯನ್ನು ಹಾಕಿಕೊಟ್ಟರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಗುರುವಾರ ವಿಧಾನಸೌಧದಲ್ಲಿ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಪುಣ್ಯತಿಥಿಯ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದರು.

ಜವಾಹರಲಾಲ್ ನೆಹರೂ ಅವರ ನಂತರ ದೇಶದ ಪ್ರಧಾನಿಗಳಾಗಿದ್ದವರು. ಜೈ ಜವಾನ್ ಜೈ ಕಿಸಾನ್ ಎಂದು ಕರೆ ಕೊಟ್ಟವರು. ಆಹಾರ ಸ್ವಾವಲಂಬನೆ ಆಗದಿದ್ದ ಸಂದರ್ಭದಲ್ಲಿ ಇಡೀ ದೇಶದ ಜನ ಒಂದು ದಿನದ ಉಪವಾಸ ಮಾಡಲು ಕರೆ ಕೊಟ್ಟಿದ್ದ ಅವರು ಅಲ್ಪಾವಧಿ ಪ್ರಧಾನ ಮಂತ್ರಿ ಆಗಿದ್ದರೂ ಆಹಾರ ಸ್ವಾವಲಂಬನೆಗೆ



ಪ್ರಯತ್ನ ಮಾಡಿದರು ಎಂದರು.

**ಪ್ರಾಮಾಣಿಕ ರಾಜಕಾರಣಿ:** ಪಾಕಿಸ್ತಾನದ ವಿರುದ್ಧ ಯುದ್ಧ ಮಾಡಿ ಗೆದ್ದಿದ್ದರು. ಅತ್ಯಂತ ಪ್ರಾಮಾಣಿಕ ರಾಜಕಾರಣಿ ಹಾಗೂ ಸ್ವಾತಂತ್ರ್ಯ ಹೋರಾಟಗಾರರು. ಅವರ ಪುಣ್ಯತಿಥಿಯನ್ನು ಇಡೀ ದೇಶದಲ್ಲಿ ಆಚರಿಸಲಾಗುತ್ತಿದೆ. ಅವರಿಗೆ ಗೌರವ ನಮನಗಳನ್ನು ಸಲ್ಲಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಮಾಯಕೊಂಡ ವಿಧಾನಸಭಾ ಕ್ಷೇತ್ರದ ಶಾಸಕ ಕೆ. ಎಸ್.ಬಸವಂತಪ್ಪ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಸೇರಿದಂತೆ ಅಧಿಕಾರಿ ವರ್ಗದವರು ಹಾಜರಿದ್ದರು.

## ರಾಜ್ಯ ಪತ್ರಕರ್ತರ ಸಹಕಾರ ಸಂಘದ 2024 ನೇ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಿದ ಸಿದ್ದರಾಮಯ್ಯ



» **ಬೆಂಗಳೂರು**

ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ 2024ನೇ ವರ್ಷದ ಕ್ಯಾಲೆಂಡರ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಡುಗಡೆ ಮಾಡಿದರು. ಮುಖ್ಯಮಂತ್ರಿಗಳ ನಿವಾಸ ಕಾವೇರಿಯಲ್ಲಿ ಮುಖ್ಯಮಂತ್ರಿಗಳು ಕ್ಯಾಲೇಂಡರ್ ಬಿಡುಗಡೆ ಮಾಡಿ ಸಂಘದ ಮನವಿ ಸ್ವೀಕರಿಸಿ, ಸಂಘ ಮುಂದಿಟ್ಟಿರುವ ಬೇಡಿಕೆಗಳನ್ನು ಪರಿಶೀಲಿಸಿ, ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್, ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷರಾದ ರಮೇಶ್ ಎಂ. ಪಾಳ್ಯ, ಉಪಾಧ್ಯಕ್ಷರಾದ ದೊಡ್ಡ ಬೊಮ್ಮಯ್ಯ, ಖಜಾಂಚಿ ಮೋಹನ್ ಕುಮಾರ್ ಬಿ.ಎನ್., ನಿರ್ದೇಶಕರಾದ ವಿನೋದ್ ಕುಮಾರ್ ಬಿ. ನಾಯ್ಕ, ರಮೇಶ್ ಹಿರೇಜಂಬೂರು, ಸೋಮಣ್ಣ ಕೆ.ಎಸ್., ಧ್ಯಾನ್ ಪೂಣಚ್ಚ, ಆನಂದ ಪಿ. ಬೈದನಮನೆ, ಪರಮೇಶ್ವರ್ ಕೆ.ವಿ., ವನಿತಾ ಎನ್., ನಯನಾ ಎಸ್., ಕಾರ್ಯದರ್ಶಿ ಕೆಂಪಣ್ಣ, ಸಿಬ್ಬಂದಿಗಳಾದ ವಿನುತಾ, ಹೇಮಂತ್, ಆನಂದ್ ಉಪಸ್ಥಿತರಿದ್ದರು.

**ಶುಭ ನುಡಿ**

ಯಾವತ್ತೂ ನಾನೇ ಸರಿ ಎಂದು ಭಾವಿಸಿದರೆ ಅಥವಾ ಅದೇ ಗುಂಗಿನಲ್ಲಿದ್ದರೆ ಈ ಜೀವನದಲ್ಲಿ ನಾವು ವಿಶೇಷವಾದುದೇನನ್ನೂ ಕಲಿಯುವುದೇ ಇಲ್ಲ. ನಮ್ಮನ್ನು ನಾವು ಸರಿ ತಪ್ಪಿನ ವಿಮರ್ಶೆಗೆ ಗುರಿಪಡಿಸಿದಾಗ ಮಾತ್ರ ಕಲಿಯಲು ಹಾಗೂ ಬೆಳೆಯಲು ಸಾಧ್ಯ

» ಶುಭೋದಯ

## ಫಾಸ್ಟ್ ನ್ಯೂಸ್

### ಎಸ್.ಜ್ಯೋತಿ ಅವರಿಗೆ ಪಿಹೆಚ್ ಡಿ ಪದವಿ ಪ್ರಧಾನ

» **ಚಿತ್ರದುರ್ಗ**

ಕನ್ನಡ ವಿಶ್ವವಿದ್ಯಾಲಯದ ಭಾಷಾಂತರ ಅಧ್ಯಯನ ವಿಭಾಗದ ಜ್ಯೋತಿ ಎಸ್ ಅವರಿಗೆ, " ಕನ್ನಡದಲ್ಲಿ ಅನುವಾದಗೊಂಡ ಮರಾಠಿ ಮಹಿಳಾ ಕಥಾ ಸಾಹಿತ್ಯದಲ್ಲಿ ಮಹಿಳಾ ಸಂವೇದನೆ" ಕುರಿತ ಸಂಶೋಧನೆಗೆ ಪಿಎಚ್‌ಡಿ ಪದವಿ ನೀಡಲಾಯಿತು. ಜನವರಿ 10, 2024ರಂದು ಕನ್ನಡ ವಿಶ್ವವಿದ್ಯಾಲಯದಲ್ಲಿ ನಡೆದ ನುಡಿಹಬ್ಬದಲ್ಲಿ ಉನ್ನತ ಶಿಕ್ಷಣ ಸಚಿವ ಎಂ ಸಿ ಸುಧಾಕರ್ ಪಿಎಚ್‌ಡಿಪದವಿ ಪ್ರದಾನ ಮಾಡಿದರು. ಭಾಷಾಂತರ ವಿಭಾಗದ ಪ್ರಾಧ್ಯಾಪಕರಾದ ವಿ ಬಿ ಗಾಯಕ್ವಾಡ್ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಲಾಗಿತ್ತು. ಕನ್ನಡದಲ್ಲಿ ಮೊದಲ ಬಾರಿಗೆ ಮರಾಠಿಯಿಂದ ಕನ್ನಡಕ್ಕೆ ಬಂದ ಕಥೆಗಾರ್ತಿಯರನ್ನು ಕುರಿತ ಸಂಶೋಧನೆ ಇದಾಗಿದೆ.

### ಕೋಟ್ಪಾ-2003ರ ಕಾಯ್ದೆಯ ತಂಬಾಕು ಕಾರ್ಯಾಚರಣೆ

» **ಚಿತ್ರದುರ್ಗ**

ಕೋಟ್ಪಾ–2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಹೊಳಲ್ಕೆರೆ ತಾಲ್ಲೂಕಿನ ನಗರ ಪ್ರದೇಶಗಳಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಬುಧವಾರ ದಾಳಿ ನಡೆಸಿ, ದಂಡ ವಿಧಿಸಿದೆ. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಸಾರ್ವಜನಿಕರಿಗೆ ಮತ್ತು ಅಂಗಡಿ ಮಾಲೀಕರಿಗೆ ಜಾಗೃತಿ ಮೂಡಿಸಲಾಯಿತು. ಸಂಬಂಧಪಟ್ಟ ಸೆಕ್ಷನ್–4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು. ಸೆಕ್ಷನ್–4 ಅಡಿಯಲ್ಲಿ 15 ಪ್ರಕರಣ ದಾಖಲಿಸಿ ರೂ. 1650 ದಂಡವನ್ನು ಮತ್ತು ಸೆಕ್ಷನ್–6ಎ ಅಡಿಯಲ್ಲಿ 4 ಪ್ರಕರಣದ ದಾಖಲಿಸಿ ರೂ. 600 ದಂಡವನ್ನು ವಸೂಲಿ ಮಾಡಲಾಯಿತು. ತಂಬಾಕು ದಾಳಿಯಲ್ಲಿ ಜಿಲ್ಲಾ ಮಟ್ಟದ ತನಿಖಾ ತಂಡದ ಅಧಿಕಾರಿಗಳಾದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್, ಹೊಳಲ್ಕೆರೆ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಕೆ.ರಂಗನಾಥ, ತಾಲ್ಲೂಕು ದೈಹಿಕ ಶಿಕ್ಷಣ ನಿರೀಕ್ಷಕ ಎ.ವಿಜಯಕುಮಾರ್, ಪೊಲೀಸ್ ಇಲಾಖೆಯ ಎಂ.ಗಣೇಶ್, ಪುರಸಭೆ ವಾಹನ ಚಾಲಕರಾದ ಎಂ.ಶರತ್, ಹನುಮಂತ ಇದ್ದರು.

### ಜಿಲ್ಲಾ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸಭೆ

» **ಚಿತ್ರದುರ್ಗ**

ಜಿಲ್ಲಾ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿಯ ಸಭೆಯನ್ನು ಇದೇ ಜನವರಿ 18ರಂದು ಬೆಳಿಗ್ಗೆ 11.30ಕ್ಕೆ ಚಿತ್ರದುರ್ಗ ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಕೆ.ಬಿ.ಚಂದ್ರಶೇಖರಪ್ಪ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

### ಜ.17ರಂದು ಪೂರ್ವ ಸಭೆ

» **ಚಿತ್ರದುರ್ಗ**

ಜನವರಿ 26ರಂದು ಜಿಲ್ಲಾಮಟ್ಟದಲ್ಲಿ ಭಾರತ ಗಣರಾಜ್ಯೋತ್ಸವ ಕಾರ್ಯಕ್ರಮದ ಆಚರಣೆ ಅಂಗವಾಗಿ ಇದೇ ಜನವರಿ 17ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ರಾಜ್ಯ ಸರ್ಕಾರದ ಮಹತ್ವದ ಗ್ಯಾರಂಟಿ ಯುವನಿಧಿಗೆ ಇಂದು ಮುಖ್ಯಮಂತ್ರಿ ಚಾಲನೆ

# ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಪ್ರಯಾಣಕ್ಕೆ ಬಸ್ ವ್ಯವಸ್ಥೆ: ಶಾಸಕ

» **ಚಳ್ಳಕೆರೆ**

ರಾಜ್ಯ ಸರ್ಕಾರ ಚುನಾವಣಾ ಸಂದರ್ಭದಲ್ಲಿ ನೀಡಿದ ಎಲ್ಲಾ ಗ್ಯಾರಂಟಿಗಳನ್ನು ಈಡೇರಿಸುವಲ್ಲಿಯಶಸ್ವಿಯಾಗಿದೆ. ಕಳೆದ ಕೆಲವು ತಿಂಗಳುಗಳಿಂದ ಜಾರಿಯಾಗದೇ ಇದ್ದ ಯುವ ನಿಧಿ ನಿರುದ್ಯೋಗಿ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು ನೀಡುವ ಯೋಜನೆ ಜ.12ರಿಂದ ಜಾರಿಯಾಗಲಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಗುರುವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಯುವನಿಧಿ ಯೋಜನೆಯ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಯುವನಿಧಿಯ ಫಲಾನುಭವಿಗಳ ಆಯ್ಕೆ ಕುರಿತು ಸರ್ಕಾರ ಕೆಲವೊಂದು ನಿಯಮ ರೂಪಿಸಿದ್ದು, ಅವುಗಳ ಅನುಷ್ಠಾನಕ್ಕಾಗಿ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಲಾಗಿದೆ. ಶಿವಮೊಗ್ಗ



ನಗರದಲ್ಲಿ ಜ.12ರಂದು ರಾಜ್ಯದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ ಯೋಜನೆಗೆ ಚಾಲನೆ ನೀಡಲಿದ್ದು, ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧುಬಂಗಾರಪ್ಪ ಸೇರಿದಂತೆ ಸರ್ಕಾರದ ಸಚಿವರು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಭೆಯಲ್ಲಿ ಉಪಸ್ಥಿತರಿದ್ದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ಮಾಹಿತಿ ನೀಡಿ, ಜಿಲ್ಲಾ ಯೋಜನಾ ಅನುಷ್ಠಾನಾಧಿಕಾರಿ ವೇಮಣ್ಣ ಮಾಹಿತಿ ನೀಡಿದ್ದು, ಜಿಲ್ಲೆಯಾದ್ಯಂತ 190 ಅರ್ಜಿಗಳು ಸಲ್ಲಿಕೆಯಾಗಿವೆ. ಕಾರ್ಯಕ್ರಮಕ್ಕೆ ಶಿವಮೊಗ್ಗಕ್ಕೆ ತೆರಳಲು ಸರ್ಕಾರದ ವತಿಯಿಂದ 30 ಕೆಎಸ್‌ಆರ್‌ಟಿಸಿ ಬಸ್‌ಗಳು ಸಿದ್ಧವಿದ್ದು ತಾಲ್ಲೂಕು ಕೇಂದ್ರದಿಂದ ಬೆಳಗ್ಗೆ 7 ಗಂಟೆಗೆ ಹೊರಡಲಿವೆ ಎಂದರು. ಇದಕ್ಕಾಗಿ ಅಧಿಕಾರಿಗಳನ್ನು ನಿಯೋಜಿಸಿದ್ದು ಅವರೂ ವಿದ್ಯಾರ್ಥಿಗಳೊಂದಿಗೆ ತೆರಳುವರು ಎಂದರು. ಸಭೆಯಲ್ಲಿ ತಹಶೀಲ್ದಾರ್ ರೇಹಾನ್ ಪಾಷ, ಉಪಸ್ಥಿತರಿದ್ದರು.

### ಮನೆ ಕಾಂಪೌಂಡನಲ್ಲಿಯೇ ಗಾಂಜಾ ಗಿಡ

# ಅಧಿಕಾರಿಗಳ ಪರಿಶೀಲನೆ: ಆರೋಪಿ ಪರಾರಿ



**ಚಳ್ಳಕೆರೆ:** ತಾಲ್ಲೂಕಿನ ಗಡಿಭಾಗದಲ್ಲಿರುವ ಕಸವಿಗೊಂಡನಹಳ್ಳಿ ಗ್ರಾಮದ ಆಂಜನೇಯ ಎಂಬುವವರ ವಾಸದ ಮನೆಯ ಮುಂಭಾಗದ ಕಾಂಪೌಂಡ್‌ನಲ್ಲಿ ಬದನೆಕಾಯಿ ಗಿಡಗಳ ಮಧ್ಯದಲ್ಲಿ 30 ಸಾವಿರ ಮೌಲ್ಯದ ಸುಮಾರು 1.510 ಕೆ.ಜಿ. ತೂಕದ ಹಸಿಗಾಂಜಾ ಗಿಡ ಬೆಳೆಸಿದ್ದು ಅದನ್ನು ವಶಪಡಿಸಿಕೊಂಡು ಆಂಜನೇಯರವರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ. ಅಬಕಾರಿ ಇನ್ಸ್‌ಪೆಕ್ಟರ್ ನಾಗರಾಜು, ಅಬಕಾರಿ ಉಪ ಆಯುಕ್ತರು, ಅಬಕಾರಿ ಉಪಅಧೀಕ್ಷಕರ ಮಾರ್ಗದರ್ಶನದಲ್ಲಿ ಈ ದಾಳಿ ನಡೆಸಿದ್ದು, ಗಾಂಜಾ ಗಿಡ ಬೆಳೆದ ಆರೋಪಿಯ ಮೇಲೆ ಪ್ರಕರಣ ದಾಖಲಿಸಿದ ಸಂದರ್ಭದಲ್ಲಿ ಆರೋಪಿ ಪರಾರಿಯಾಗಿರುತ್ತಾನೆ. ಈ ಸಂದರ್ಭದಲ್ಲಿ ಅಬಕಾರಿ ನಿರೀಕ್ಷಕ ಡಿ.ಟಿ.ತಿಪ್ಪಯ್ಯ, ಉಪನಿರೀಕ್ಷಕ–2ಟಿ.ರಂಗಸ್ವಾಮಿ, ಪೇದೆಗಳಾದ ಎಸ್.ರಘುನಾಥ, ನಾಗರಾಜ, ಸೋಮಶೇಖರ್, ಶಾಂತಣ್ಣ ಮುಂತಾದವರು ಪಾಲ್ಗೊಂಡಿದ್ದರು.


ಪುಟ ↘ 3






ದಕ್ಷತೆ ಮತ್ತು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಿ ಸಾರ್ವಜನಿಕರ ವಿಶ್ವಾಸಗಳಿಸಿ: ರಘುಮೂರ್ತಿ

# ನಿಮ್ಮ ಕಾರ್ಯದಿಂದ ಮಾತ್ರ ಗೌರವ: ಶಾಸಕ

» **ಚಳ್ಳಕೆರೆ**

ರಾಜ್ಯ ಸರ್ಕಾರದ ನಾಲ್ಕುಪ್ರಮುಖ ಗ್ಯಾರಂಟಿಗಳನ್ನು ಜನರಿಗೆ ತಲುಸುವ ಪ್ರಾಮಾಣಿಕ ಕಾರ್ಯವನ್ನು ರಾಜ್ಯ ಸರ್ಕಾರಿ ನೌಕರರು ಮಾಡುವ ಮೂಲಕ ಸರ್ಕಾರಕ್ಕೆ ಗೌರವ ತಂದಿದ್ದಾರೆ. ಸರ್ಕಾರ ಯಾವುದೇ ಯೋಜನೆ ಅನುಷ್ಠಾನವಾಗಲು ನಿಮ್ಮ ಸಹಕಾರ ಮುಖ್ಯ. ಆದ್ದರಿಂದ ಸರ್ಕಾರಿ ನೌಕರರ ಬೇಡಿಕೆಗಳನ್ನು ಈಡೇರಿಸುವಂತೆ ಮುಖ್ಯಮಂತ್ರಿಗಳ ಮೇಲೆ ಒತ್ತಡ ತರುವುದಾಗಿ ಶಾಸಕ ಟಿ.ರಘುಮೂರ್ತಿ ತಿಳಿಸಿದರು.





ಅವರು, ಗುರುವಾರ ಸರ್ಕಾರಿ ನೌಕರರ ಭವನದ ಮೇಲ್ಭಾಗದಲ್ಲಿ ಸಂಘ ನೂತನ ಸಮುದಾಯ ಭವನದ ಶಂಕುಸ್ಥಾಪನೆ, ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ, ವ್ಯಕ್ತಿ ವಿಕಸನ ಕಾರ್ಯಗಾರ ಹಾಗೂ ಸರ್ವಸದಸ್ಯರ ಸಭೆಯನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ರಾಜ್ಯ ಸರ್ಕಾರಿ ನೌಕರರ ಅಂಗಸಂಸ್ಥೆಯಾದ ಚಳ್ಳಕೆರೆ ತಾಲ್ಲೂಕು ಸರ್ಕಾರಿ ನೌಕರರ ಸಂಘ ಅತ್ಯಂತ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿದೆ. ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಸರ್ಕಾರದ ಕಾರ್ಯಕ್ರಮಗಳನ್ನು ಜಾರಿಗೆ ತರುವಲ್ಲಿ ಶ್ರಮಿಸುತ್ತಿದ್ದಾರೆ. ಸಂಘದ ನೂತನ ಸಮುದಾಯ ಭವನಕ್ಕೆ ಸುಮಾರು ಒಂದು ಕೋಟಿ ರೂಪಾಯಿ ವೆಚ್ಚವಾಗಲಿದ್ದು ಹಂತ, ಹಂತವಾಗಿ ನನ್ನ ಅನುದಾನದಲ್ಲೇ ನೀಡಿ ನೂತನ ಸಮುದಾಯ ಭವನದ ನಿರ್ಮಾಣ ಕಾರ್ಯ ಶೀಘ್ರದಲ್ಲೇ ಪ್ರಾರಂಭವಾಗಲಿ ಎಂದು ಶುಭಹಾರೈಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಘದ ತಾಲ್ಲೂಕು ಅಧ್ಯಕ್ಷ ಪಿ.ಎಲ್.ಲಿಂಗೇಗೌಡ, ಕ್ಷೇತ್ರದ ಅಭಿವೃದ್ಧಿಯಲ್ಲಿ ಶಾಸಕರು ಸ್ವಯಂ ಪ್ರೇರಣೆಯಿಂದ ತೊಡಗಿಕೊಂಡು ಹಲವಾರು ಅಭಿವೃದ್ಧಿ ಕಾಮಗಾರಿ ಮಾಡುವ ಮೂಲಕ ಜನಮಾನಸದ ಶಾಸಕರಾಗಿ ಹೊರಹೊಮ್ಮಿದ್ದಾರೆ. ಪ್ರಸ್ತುತ ಸರ್ಕಾರಿ ನೌಕರರ ಮೂರು ಪ್ರಮುಖ ಬೇಡಿಕೆಯಾದ 7ನೇ ವೇತನ ಆಯೋಗ ಜಾರಿ, ಒಪಿಎಸ್, ಇನ್ನಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದರು.

ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ, ಸರ್ಕಾರದ ಮೇಲೆ ಬೇಡಿಕೆಗಳ ಈಡೇರಿಕೆಗಾಗಿ ನೌಕರರ ಸಂಘದಿಂದ ಹಲವಾರು ಒತ್ತಡ ಮಾಡುವ ಮೂಲಕ ಅನೇಕ ಯೋಜನೆಗಳ ಜಾರಿಗೆ ಸಂಘ ಶ್ರಮಿಸಿದೆ. 7ನೇ ವೇತನ ಆಯೋಗ ಹಾಗೂ ಒಪಿಎಸ್ ಬೇಡಿಕೆಗಳನ್ನು ಸರ್ಕಾರ ಈಡೇರಿಸುವ ಕುರಿತು ಸೌಹಾರ್ದಿತ ಚರ್ಚೆ ನಡೆದಿದೆ. ಕೆಲವೊಂದು ಸಂದರ್ಭಗಳಲ್ಲಿ ಮಾತ್ರ ಸರ್ಕಾರದ ಸ್ಥಿತಿಗತಿಗಳನ್ನು ನೋಡಿ ನಿರ್ಧಾರ ಕೈಗೊಳ್ಳಬೇಕಿದೆ. ಒಟ್ಟಿನಲ್ಲಿ ಸರ್ಕಾರಿ ನೌಕರರ ಹಿತ ಕಾಪಾಡುವಲ್ಲಿ ರಾಜ್ಯ ಸಂಘ ಸದಾಜಾಗೃತವಾಗಿದೆ ಎಂದರು. ಜಿಲ್ಲಾಧ್ಯಕ್ಷ ಕೆ.ಟಿ.ತಿಮ್ಮಾರೆಡ್ಡಿ ಮಾತನಾಡಿ, ಶಾಸಕರು ಮುಖ್ಯಮಂತ್ರಿಗಳೊಂದಿಗೆ ಹೆಚ್ಚು ವಿಶ್ವಾಸ ಹೊಂದಿದ್ದಾರೆ. ಸರ್ಕಾರಿ ನೌಕರರ ಬೇಡಿಕೆಗಳನ್ನು ಈಡೇರಿಸುವಲ್ಲಿ ಶಾಸಕರು ಪ್ರಮುಖ ಪಾತ್ರ ವಹಿಸಬೇಕು. ನಿಮ್ಮ ಮೇಲೆ ಸರ್ಕಾರಿನೌಕರರಿಗೆ ಅಪಾರವಾದ ವಿಶ್ವಾಸ, ಗೌರವವಿದೆ ಎಂದರು.ಕಾರ್ಯಕ್ರಮದಲ್ಲಿ ರಾಜ್ಯ ಖಜಾಂಚಿ ಡಾ.ಎಂ.ಸಿದ್ದರಾಮಣ್ಣ, ಹಿರಿಯ ಉಪಾಧ್ಯಕ್ಷರಾದ ಎಂ.ವಿ.ರುದ್ರಪ್ಪ, ಎಸ್.ಬಸವರಾಜು, ಡಿಡಿಪಿಐ ಕೆ.ರವಿಶಂಕರರೆಡ್ಡಿ, ತಹಶೀಲ್ದಾರ್ ರೇಹಾನ್‌ಪಾಷ, ಇಒ ಎಚ್.ಶಶಿಧರ, ಬಿಇಒ ಕೆ.ಎಸ್.ಸುರೇಶ್, ಪೌರಾಯುಕ ಚಂದ್ರಪ್ಪ, ಡಾ.ಎನ್.ಕಾಶಿ, ಜಿಲ್ಲಾ ಗೌರವಾಧ್ಯಕ್ಷ ಲೋಕೇಶ್, ರಾಜ್ಯಪರಿಷತ್ ಸದಸ್ಯ ಭಾಗೇಶ್‌ಉಗ್ರಣ, ಜಿಲ್ಲಾ ಕಾರ್ಯದರ್ಶಿ ಎಸ್.ಕೆ.ಮಂಜುನಾಥ, ತಾಲ್ಲೂಕು ರಾಜ್ಯಪರಿಷತ್‌ಸದಸ್ಯಎಸ್.ಕೆ.ಬಸವರಾಜು, ಗೌರವಾಧ್ಯಕ್ಷ ಎಸ್.ಬಿ.ತಿಪ್ಪೇಸ್ವಾಮಿ, ಪ್ರಧಾನ ಕಾರ್ಯದರ್ಶಿ ಉಮೇಶ್, ರಾಜ್ಯಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್, ಡಿ.ದಯಾನಂದ, ಎಸ್.ಭೀಮರಾಜ್, ವೆಂಕಟಲಕ್ಷ್ಮಿ, ತಿಪ್ಪೀರಮ್ಮ, ಶ್ವೇತ ಉಪಸ್ಥಿತರಿದ್ದರು.

# ಕ್ಲಿನಿಕ್‌ಗಳ ಮೇಲೆ ಅಧಿಕಾರಿಗಳು ದಾಳಿ: ಆಯುಷ್ ವೈದ್ಯರುಗಳ ಪ್ರತಿಭಟನೆ



» **ಚಿತ್ರದುರ್ಗ**

ಇತ್ತೀಚೆಗೆ ಕ್ಲಿನಿಕ್‌ಗಳ ಮೇಲೆ ದಾಳಿ ನಡೆಸಿ ನಕಲಿ ವೈದ್ಯರು ಎಂದು ಬಿಂಬಿಸುತ್ತಿರುವುದನ್ನು ವಿರೋಧಿಸಿ ಆಯುಷ್ ಫೆಡರೇಷನ್ ಆಫ್ ಇಂಡಿಯಾ ಜಿಲ್ಲಾ ಶಾಖೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿ ಕಚೇರಿ ಸಹಾಯಕರಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ಪ್ರಾಕ್ಟಿಷನರ್ ಮೆಡಿಕಲ್ ಎಸ್ಟಾಬ್ಲಿಷ್‌ಮೆಂಟ್ ಕಾಯ್ದೆಯನ್ವಯ ನೊಂದಣಿಯಾಗಿರುವ ವೈದ್ಯರುಗಳ ಮೇಲೆ ದಾಳಿ ನಡೆಸಿ ನಕಲಿ ಎನ್ನುತ್ತಿರುವುದು ನಿಲ್ಲಬೇಕು.

ಅಧಿಕಾರಿಗಳು ದಾಳಿ ನಡೆಸುವ ಸಂದರ್ಭದಲ್ಲಿ ವೈದ್ಯರುಗಳೆನ್ನುವ ಗೌರವವನ್ನು ಕೊಡದೆ ಕೈಗೆ ಸಿಕ್ಕ ವಸ್ತುಗಳನ್ನೆಲ್ಲಾ ಚೆಲ್ಲಾಪಿಲ್ಲಿಯಾಗಿಸಿ ಕಿರುಕುಳ ನೀಡುತ್ತಿರುವುದು ವೈದ್ಯಕೀಯ ಲೋಕಕ್ಕೆ ಅಪಮಾನ ಮಾಡಿದಂತಾಗುತ್ತದೆ. ವೈದ್ಯರ ಕುಂದುಕೊರತೆ ವಿಚಾರಣಾ ಸಮಿತಿಗೆ ಆಯುಷ್ ಹಾಗೂ ಆಯುರ್ವೇದ ವೈದ್ಯರೊಬ್ಬರನ್ನು ನೇಮಕ ಮಾಡಿಕೊಳ್ಳಬೇಕೆಂದು ಪ್ರತಿಭಟನೆಯ ನೇತೃತ್ವ ವಹಿಸಿದ್ದ ಆಯುಷ್ ಫೆಡರೇಷನ್ ಆಫ್ ಇಂಡಿಯಾ ಜಿಲ್ಲಾ ಶಾಖೆ ಅಧ್ಯಕ್ಷ ಡಾ.ಗೋಪಾಲಕೃಷ್ಣ ಜಿ.ಎಸ್. ಆಗ್ರಹಿಸಿದರು.

ಆಯುಷ್ ಫೆಡರೇಷನ್ ಆಫ್ ಇಂಡಿಯಾ ಜಿಲ್ಲಾ ಶಾಖೆಯ ಕಾರ್ಯದರ್ಶಿ ಡಾ. ಮಹಮದ್ ಖಾಸಿಂ, ಆಯುಷ್ ವೈದ್ಯರುಗಳಾದ ಲಿಂಗದೊರೆ, ಪ್ರಶಾಂತ್, ಮಂಜುನಾಥ, ಸಿರಿಯಣ್ಣ, ಉಮೇಶ್, ಶಂಕರ್‌ನಾರಾಯಣ್, ದಿವ್ಯ ಸೇರಿದಂತೆ ನೂರಾರು ವೈದ್ಯರುಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ವಿದ್ಯಾರ್ಥಿಗಳಿಗೆ ಕಲಿಕಾ ಸಾಮಾಗ್ರಿ ವಿತರಣೆ



» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಹಿಂದುಳಿದಿದ್ದು ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳು ಬಡತನದಿಂದ ಕಲಿಕಾ ಸಾಮಾಗ್ರಿಗಳನ್ನು ಖರೀದಿಸಲು ಸಾಧ್ಯವಾಗದೆ ಶೈಕ್ಷಣಿಕ ಚಟುವಟಿಕೆಗಳು ಕುಂಠಿತವಾಗಿರುತ್ತವೆ ಎಂದು ಸಾಮಾಜಿಕ ಸೇವಾ ಸಂಸ್ಥೆ ಪಿ.ಕೆ.ಎಸ್ ಫೌಂಡೇಷನ್ ಸಂಸ್ಥಾಪಕ ಪಿ.ಕೆ.ಸಂತೋಷ್ ಕುಮಾರ್ ತಿಳಿಸಿದರು.

ತಾಲ್ಲೂಕು ಇಂಗಳದಾಳು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಂಚಿಗನಾಳ್ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸುಮಾರು 150 ವಿದ್ಯಾರ್ಥಿಗಳಿಗೆ ಉಚಿತವಾಗಿ ತಲಾ ಮೂರು ನೋಟ್ ಪುಸ್ತಕ ವಿತರಿಸಿ ಮಾತನಾಡಿದರು. ಪಿ.ಕೆ.ಎಸ್‌ಕಂಪ್ಯೂಟರ್ ಅಕಾಡೆಮಿ ವಿದ್ಯಾರ್ಥಿಗಳುವಿದ್ಯಾರ್ಥಿಗಳಿಂದ ವಿದ್ಯಾರ್ಥಿಗಳಿಗೆ ಸಹಾಯ ಹಸ್ತದ ಬೆಸುಗೆ ಕಾರ್ಯಕ್ರಮದಡಿ ಏರ್ಪಡಿಸಿದ ಪುಸ್ತಕ ನಿಧಿ ಇಂದ ಪ್ರತಿ ವರ್ಷ ಬಡ, ಹಿಂದುಳಿದ ವಿದ್ಯಾರ್ಥಿಗಳಿಗೆ ಉಚಿತವಾಗಿ ಕಲಿಕಾಸಾಮಗ್ರಿಗಳನ್ನು ವಿತರಿಸಿ ಪ್ರೋತ್ಸಾಹಿಸುತ್ತಿರುವುದಾಗಿ ತಿಳಿಸಿದರು.ವಾಣಿಜ್ಯಶಾಸ್ತ್ರದ ವಿಶ್ರಾಂತ ಸಹ ಪ್ರಾಧ್ಯಾಪಕ ಕೆ.ರಾಮರಾವ್‌ರವರು ಮಾತನಾಡುತ್ತಾ, ಗ್ರಾಮೀಣ ವಿದ್ಯಾರ್ಥಿಗಳಲ್ಲಿ ಪ್ರತಿಭೆಗೆ ಕೊರತೆಯಿರುವುದಿಲ್ಲ. ಆದರೆ ಸಕಾಲದಲ್ಲಿ ಅವರಿಗೆ ಮಾರ್ಗದರ್ಶನ ಮತ್ತು ಪ್ರೋತ್ಸಾಹ ಸಿಗುವುದಿಲ್ಲ ಎಂದರು.ಗ್ರಾಮೀಣ ಭಾಗದ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಪಿ.ಕೆ. ಎಸ್ ಫೌಂಢೇಷನ್‌ನಿಂದ ಉಚಿತವಾಗಿ ನೋಟ್ ಪುಸ್ತಕಗಳನ್ನು ವಿತರಿಸುತ್ತಿರುವುದು ಸಂತೋಷದ ವಿಷಯ. ಪ್ರತಿ ವರ್ಷಇನ್ನು ಹೆಚ್ಚಿನ ಶಾಲಾ ವಿದ್ಯಾರ್ಥಿಗಳಿಗೆ ಸೇವೆ ಸಲ್ಲಿಸಲು ಸಂತೋಷ್‌ಕುಮಾರ್‌ರವರಿಗೆ ಶಕ್ತಿ ಕೊಡಲಿ ಎಂದು ಹಾರೈಸಿದರು.ಮುಖಂಡ ಲಕ್ಷ್ಮೀಕಾಂತ್ ಮಾತನಾಡುತ್ತಾ, ಶಾಲೆಯ ವಿದ್ಯಾರ್ಥಿಗಳು ಇದರ ಸದುಪಯೋಗ ಪಡಿಸಿಕೊಂಡು ಉತ್ತಮರೀತಿಯ ಶೈಕ್ಷಣಿಕ ಬೆಳವಣಿಗೆ ಕಾಣಬೇಕೆಂದರು. ನಮ್ಮ ಗ್ರಾಮದ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಪುಸ್ತಕಗಳನ್ನು ವಿತರಿಸಲು ಆಯ್ಕೆ ಮಾಡಿಕೊಂಡಿದ್ದಕ್ಕೆ ಪಿ.ಕೆ.ಎಸ್ ಫೌಂಡೇಷನ್ ಸಂಸ್ಥಾಪಕರಾದ ಸಂತೋಷ ಕುಮಾರ್‌ರವರನ್ನು ಶ್ಲಾಘಿಸಿದರು. ಗ್ರಾಮ ಪಂಚಾಯಿತಿ ಸದಸ್ಯರಾದ ಚೈತ್ರ ಲಕ್ಷಿಕಾಂತ, ಶಿ ವೀರ ಮಂಜುಳಾದೇವಿ ಹಾಜರಿದ್ದರು.

ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಯುವ ಜನರಿಗೆ ಕಾನೂನು ಅರಿವು-ನೆರವು

# ಸ್ವಾಮಿ ವಿವೇಕಾನಂದರ 161ನೇ ಜನ್ಮ ದಿನಾಚರಣೆ

» **ಚಿತ್ರದುರ್ಗ**

ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ, ನೆಹರು ಯುವ ಕೇಂದ್ರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ದಾವಣಗೆರೆ ವಿಶ್ವವಿದ್ಯಾನಿಲಯ ಜಿ.ಆರ್.ಹಳ್ಳಿ ಜ್ಞಾನ ಗಂಗೋತ್ರಿ ಸ್ನಾತಕೋತ್ತರ ಅಧ್ಯಯನ ಕೇಂದ್ರ ಇವರುಗಳ ಸಂಯುಕ್ತಾಶ್ರಯದಲ್ಲಿ ಸ್ವಾಮಿ ವಿವೇಕಾನಂದರ 161ನೇ ಜನ್ಮ ದಿನಾಚರಣೆ ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಯುವ ಜನರಿಗೆ ಕಾನೂನು ಅರಿವು-ನೆರವು ಕಾರ್ಯಕ್ರಮವನ್ನು ಇದೇ ಜನವರಿ 12ರಂದು ಮಧ್ಯಾಹ್ನ 12ಕ್ಕೆ ಚಿತ್ರದುರ್ಗ ತಾಲ್ಲೂಕು ಜಿ.ಆರ್.ಹಳ್ಳಿಯ ದಾವಣಗೆರೆ ವಿಶ್ವವಿದ್ಯಾಲಯ ಜ್ಞಾನಗಂಗೋತ್ರಿ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉದ್ಘಾಟನೆ ನೆರವೇರಿಸಿ, ಮಾನವ ಹಕ್ಕುಗಳ ಕುರಿತು ಉಪನ್ಯಾಸ ನೀಡುವರು.ಜಿ.ಆರ್.ಹಳ್ಳಿ ಸ್ನಾತಕೋತ್ತರ ಅಧ್ಯಯನ ಕೇಂದ್ರ ಕನ್ನಡ ವಿಭಾಗದ ವಿಷಯ ಸಂಯೋಜಕ ಡಾ.ಹೆಚ್.ಜಿ.ವಿಜಯಕುಮಾರ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್, ಜ್ಞಾನ ಗಂಗೋತ್ರಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಅರ್ಥಶಾಸ್ತ್ರ ಅಧ್ಯಯನ ವಿಭಾಗದ ಸಂಯೋಜಕ ಡಿ.ಹೆಚ್.ಗಿರೀಶ, ರಾಸಾಯನಶಾಸ್ತ್ರ ಅಧ್ಯಯನ ವಿಭಾಗದ ಸಂಯೋಜಕ ಡಾ.ರಾಜೇಂದ್ರ ಪ್ರಸಾದ್, ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗದ ಸಂಯೋಜಕ ಡಾ.ಸತೀಶ, ಸಸ್ಯಶಾಸ್ತ್ರ ಅಧ್ಯಯನ ವಿಭಾಗದ ಸಂಯೋಜಕಿ ನಿವೇದಿತಾ ಭಾಗವಹಿಸುವರು ಎಂದು ಜಿಲ್ಲಾ ಯುವಜನ ಅಧಿಕಾರಿ ಎನ್.ಸುಹಾಸ್ ತಿಳಿಸಿದ್ದಾರೆ.

**ಫಾಸ್ಟ್ ನ್ಯೂಸ್**

## ಯುವತಿ ಕಾಣೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ತರಳಬಾಳು ನಗರ ಪಾರ್ಕ್ ಹಿಂಭಾಗದ ನಿವಾಸಿ ಪ್ರೇಮಾ.ಆರ್ ಎಂಬ ಯುವತಿ ಕಾಣೆಯಾಗಿರುವ ಪ್ರಕರಣ 2024ರ ಜನವರಿ 7 ರಂದು ಚಿತ್ರದುರ್ಗ ಕೋಟೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಯುವತಿಯ ಚಹರೆ ಇಂತಿದೆ. ಪ್ರೇಮ.ಆರ್ (19ವರ್ಷ) ತಂದೆ ರಾಜೇಶ್ ಗೋಸ್ವಾಮಿ, 5 ಅಡಿ ಎತ್ತರ, ದುಂಡು ಮುಖ, ಗುಂಗುರು ಕೂದಲು, ಕೆನ್ನೆಯ ಮೇಲೆ ಕಪ್ಪಾಗಿರುವ ಗುರುತು ಇರುತ್ತದೆ. ಕನ್ನಡ ಮತ್ತು ಹಿಂದಿ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಸಿಮೆಂಟ್‌ಬಣ್ಣದನೈಟ್‌ಫ್ಯಾಂಟ್,ನೀಲಿಹಾಗೂಬಿಳಿ ಮಿಶ್ರಿತ ಟಾಪ್ ಮತ್ತು ಬಿಳಿ ಕಾಟನ್ ವೇಲು ಧರಿಸಿದ್ದಳು. ಈ ಮೇಲ್ಕಂಡ ಚಹರೆಯುಳ್ಳ ಯುವತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ಕೋಟೆ ಪೋಲೀಸ್ ಠಾಣೆ ಪೊಲೀಸ್ ನಿರೀಕ್ಷಕರು ದೂರವಾಣಿ ಸಂಖ್ಯೆ 08194-222933, ಪೋಲೀಸ್ ಉಪಾಧೀಕ್ಷಕರು 08194-222430, 9480803120, ಚಿತ್ರದುರ್ಗ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ 08194-222782 ಗೆ ಸಂಪರ್ಕಿಸಬಹುದು

## ಮಹಿಳೆ ಕಾಣೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಚೇಳುಗುಡ್ಡದ ಮಣಿ ಮುದ್ರೇಶ್ವರ ದೇವಸ್ಥಾನದ ಹತ್ತಿರ, ಪಿ &ಟಿ ಕ್ವಾಟ್ರಸ್ ಹಿಂಭಾಗದ ನಿವಾಸಿ ಕಣುಮಕ್ಕ ಎಂಬ ಮಹಿಳೆ ಕಾಣೆಯಾಗಿರುವ ಪ್ರಕರಣ 2023ರ ಡಿ.5 ರಂದು ಚಿತ್ರದುರ್ಗ ಕೋಟೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಮಹಿಳೆಯ ಚಹರೆ ಇಂತಿದೆ. ಕಣುಮಕ್ಕ (63ವರ್ಷ) ಗಂಡ ಲೇಟ್ ಅಜ್ಜಪ್ಪ, 5 ಅಡಿ ಎತ್ತರ, ಕೋಲು ಮುಖ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈ ಬಣ್ಣ, ಮುಂಗೈ ಮೇಲೆ ಹೂವಿನ ಹಚ್ಚೆ ಗುರುತು ಇದೆ. ಬಲಗಾಲು ಹೆಬ್ಬೆರಳಲ್ಲಿ ಗಾಯದ ಗುರತು ಇರುತ್ತದೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಕಪ್ಪು ಬಣ್ಣದ ಗೋಲ್ಡ್ ಕಲರ್ ಚುಕ್ಕೆಗಳಿರುವ ಸೀರೆ, ಗೋಲ್ಡ್ ಕಲರ್ ಬ್ಲೌಸ್, ಕೈಯಲ್ಲಿ ಆರ್ಟಿಫಿಷಿಯಲ್ ಗೋಲ್ಡ್ ಕಲರ್ ಸಿಂಗಲ್ ಬಳೆ ಹಾಗೂ ಕಿವಿಯಲ್ಲಿ ಬೆಂಡೋಲೆ, ಮತ್ತು ಕೊರಳಲ್ಲಿ ಚೈನ್ ಕೂಡ ಧರಿಸಿರುತ್ತಾರೆ.ಈ ಮೇಲ್ಕಂಡ ಚಹರೆಯುಳ್ಳ ಮಹಿಳೆ ಕುರಿತು ಮಾಹಿತಿ ತಿಳಿದು ಬಂದಲ್ಲಿ ಕೋಟೆ ಪೋಲೀಸ್ ಠಾಣೆ ಪೊಲೀಸ್ ನಿರೀಕ್ಷಕರು ದೂರವಾಣಿ ಸಂಖ್ಯೆ 08194-222933, ಪೋಲೀಸ್ ಉಪಾಧೀಕ್ಷಕರು 08194-222430, 9480803120, ಚಿತ್ರದುರ್ಗ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ 08194-222782 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಕೋಟೆ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಆರ್‌ಪಿಸಿ, ಎನ್‌ಡಿಪಿಎಸ್ ಕಾಯ್ದೆ ಕುರಿತು ಕಾರ್ಯಾಗಾರ

» **ಚಿತ್ರದುರ್ಗ**

ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಪೊಲೀಸ್ ವತಿಯಿಂದ ನ್ಯಾಯಾಂಗ ಹಾಗೂ ಪೊಲೀಸ್ ಅಧಿಕಾರಿಗಳಿಗೆ ಸಿಆರ್‌ಪಿಸಿ ಮತ್ತು ಎನ್‌ಡಿಪಿಎಸ್ ಕಾಯ್ದೆ ಕುರಿತು ಕಾರ್ಯಾಗಾರವನ್ನು ಇದೇ ಜನವರಿ 13ರಂದು ಬೆಳಿಗ್ಗೆ 9.45ಕ್ಕೆ ಚಿತ್ರದುರ್ಗ ಜಿಪಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಹೈಕೋರ್ಟ್ ನ್ಯಾಯಮೂರ್ತಿ ಹಾಗೂ ಚಿತ್ರದುರ್ಗ ಆಡಳಿತಾತ್ಮಕ ನ್ಯಾಯಮೂರ್ತಿ ಜಸ್ಟಿಸ್ ಪ್ರದೀಪ್ ಸಿಂಗ್ ಯೆರೂರ್ ಉದ್ಘಾಟನೆ ನೆರವೇರಿಸವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶೆ ಕೆ.ಬಿ.ಗೀತಾ ಭಾಗಹಿಸುವರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ಸಂಪನ್ಮೂಲ ವ್ಯಕ್ತಿ ಎಸ್.ಆರ್.ಸೋಮಶೇಖರ್, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಭಾಗವಹಿಸುವರು.

## ಬಾಲಕಾರ್ಮಿಕ ನಿಷೇಧ ಕುರಿತು ಜಾಗೃತಿ ಓರ್ವ ಬಾಲಕಾರ್ಮಿಕ ರಕ್ಷಣೆ

» **ಚಿತ್ರದುರ್ಗ**

ಚಳ್ಳಕೆರೆ ನಗರದ ವ್ಯಾಪ್ತಿಯಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರವಸ್ಥೆ ಕಾರ್ಮಿಕ ನಿಷೇಧ 1986 ರ ಕಾಯಿದೆ ಅಡಿ ಅನಿರೀಕ್ಷಿತ ದಾಳಿ ಕೈಗೊಳ್ಳಲಾಯಿತು. ಚಳ್ಳಕೆರೆ ನಗರ ವ್ಯಾಪ್ತಿಯ ವಿವಿಧ ವಾಣಿಜ್ಯ ಸಂಸ್ಥೆಗಳಾದ ಹೋಟೆಲ್, ಗ್ಯಾರೇಜ್, ಬೇಕರಿ ಅಂಗಡಿಗಳಿಗೆ ಭೇಟಿ ನೀಡಿ, ಸ್ಟಿಕರ್ಸ್ ಹಾಗೂ ಕರಪತ್ರಗಳನ್ನು ಸಂಸ್ಥೆಯ ಮಾಲೀಕರಿಗೆ ನೀಡುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸುಲಾಯಿತು.ದಾಳಿಯನ್ನು ಮಾಡುವಾಗ ಡಿಎಂಎಸ್ ಟೂವೀಲರ್ ಗ್ಯಾರೇಜ್‌ನಲ್ಲಿ ಬಾಲ ಕಾರ್ಮಿಕನಾಗಿ ಕೆಲಸ ನಿರ್ವಹಿಸುತ್ತಿದ್ದ ಮಗುವನ್ನು ಪತ್ತೆ ಹಚ್ಚಿ, ಕೆಲಸದಿಂದ ಬಿಡುಗಡೆಗೊಳಿಸಿ ಚಿತ್ರದುರ್ಗ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರು ಪಡಿಸಿ ಪುನರ್ವಸತಿಗೊಳಿಸಲಾಯಿತು. ತಂಡದಲ್ಲಿ ಚಳ್ಳಕೆರೆ ವೃತ್ತದ ಕಾರ್ಮಿಕ ನಿರೀಕ್ಷಕಿ ಟಿ.ಕುಸುಮ, ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ಲಕ್ಷ್ಮಿ, ಚಿತ್ರ ಡಾನ್ ಬಾಸ್ಕೋ ನಿರ್ದೇಶಕ ಸ್ಟೀಫನ್ ಫಾದರ್, ಶಿಕ್ಷಣ ಇಲಾಖೆ ಸಿಆರ್‌ಪಿ ಶಿವಶಂಕರ್, ಪೊಲೀಸ್ ಸಿಬ್ಬಂದಿ ವಿಜಯ್ ಕುಮಾರ್ ಇದ್ದರು.

**ಪ್ರಮುಖ ಸುದ್ದಿ**

# ಪ್ರಾಚ್ಯ ಪ್ರಜ್ಞೆ ಸ್ಪರ್ಧಾ ಕಾರ್ಯಕ್ರಮಕ್ಕೆ ಬಿಇಓ ಚಾಲನೆ

» **ಹಿರಿಯೂರು**

ಪ್ರಾಚೀನ ಸ್ಮಾರಕಗಳು ನಮ್ಮ ದೇಶಕ್ಕೆ ಸಂಪತ್ತು. ಅಲ್ಲದೇ ದೊಡ್ಡ ಆಸ್ತಿಗಳು. ಆದರೆ ಇಂದು ನಮ್ಮಲ್ಲಿ ಪ್ರಾಚ್ಯ ಪ್ರಜ್ಞೆಯಿಲ್ಲದೇ ಅನೇಕ ಸ್ಮಾರಕಗಳು ನಶಿಸುತ್ತಿದ್ದು, ಅವುಗಳನ್ನು ಉಳಿಸಿ ಮುಂದಿನ ಪೀಳಿಗೆಗೆ ಸಂರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಂ. ತಿಪ್ಪೇಸ್ವಾಮಿ ಹೇಳಿದರು.

ನಗರದ ಸರಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲೆ ವಿಭಾಗದ ಸಭಾಂಗಣದಲ್ಲಿ ಗುರುವಾರ ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ನೇತೃತ್ವದಲ್ಲಿ ಆಯೋಜಿಸಿದ್ದ ಪ್ರಾಚ್ಯ ಪ್ರಜ್ಞೆ ಸ್ಪರ್ಧಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಹಿರಿಯೂರು ನಗರದ ಸರಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಪ್ರಾಚ್ಯ ಪ್ರಜ್ಞೆ ಸ್ಪರ್ಧಾ ಕಾರ್ಯಕ್ರಮವನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಂ.ತಿಪ್ಪೇಸ್ವಾಮಿ ಉದ್ಘಾಟಿಸಿದರು.

ಹಿಂದೆ ಹೇಗಿತ್ತು, ಪ್ರಸ್ತುತ ಹೇಗಿದೆ, ಮುಂದೆ ಏನಾಗಬೇಕು ಎಂಬುದನ್ನು ಇತಿಹಾಸ ಅಧ್ಯಯನದಿಂದ ತಿಳಿಯಬಹುದು. 1835ರಿಂದ ಸುಮಾರು 25ವರ್ಷಗಳ ಕಾಲ ಚಿತ್ರದುರ್ಗ ವಿಭಾಗದ ಸೂಪರ್ ಇಂಡೆಂಟ್ ಆಗಿ ಸೇವೆ ಸಲ್ಲಿಸುತ್ತಿದ್ದ ಮೆಜರ್ ಜನರಲ್ ಆರ್. ಎಸ್.ಡಾಬ್ಸ್ ಅವರು ಹಿರಿಯೂರಿನಲ್ಲಿ ಹಾದು ಹೋಗಿದ್ದ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಗೆ ಮೇಲ್ದರ್ಜೆಗೇರಿಸಬಹುದು ಎಂದು ಗುರುತಿಸಿದವರು. ಅಲ್ಲದೇ ಬ್ರಿಟಿಷ್ ಕಾಲದಲ್ಲಿ ನಿರ್ಮಾಣವಾಗಿದ್ದ ನಗರದ ವೇದಾವತಿ ಸೇತುವೆ ರಾಜ್ಯದ ಅನೇಕ ಸೇತುವೆಗಳ ನಿರ್ಮಾಣಕ್ಕೂ ಮಾದರಿಯಾಗಿದೆ. ಇಂತಹ ಸ್ಥಳೀಯ ಇತಿಹಾಸದ ಮೇಲೆ ಬೆಳಕು ಚೆಲ್ಲುವಂತಹ ಚಾರಿತ್ರಿಕ ಘಟನೆಗಳನ್ನು ವಿದ್ಯಾರ್ಥಿಗಳು ತಿಳಿದು ಕೊಳ್ಳಬೇಕು ಎಂದರು.

ಸಮಾಜ ವಿಜ್ಞಾನ ಸಹಶಿಕ್ಷಕ ಸಿ.ಎಸ್. ರಾಮಚಂದ್ರಪ್ಪ ಮಾತನಾಡಿ ಐತಿಹಾಸಿಕ ಸ್ಮಾರಕಗಳು ಹಳೆಯ ವಿಚಾರಗಳು ಹಾಗೂ ರಾಜಕೀಯ, ಆರ್ಥಿಕ, ಸಾಮಾಜಿಕ, ಧಾರ್ಮಿಕ, ಸಾಹಿತ್ಯ, ವಿಜ್ಞಾನ, ಕಲೆ, ವಾಸ್ತುಶಿಲ್ಪ ಮುಂತಾದ ಮಾಹಿತಿ ತಿಳಿಸುವ ಉದ್ದೇಶದಿಂದ ನಿರ್ಮಿಸಲ್ಪಟ್ಟಿವೆ. ಆದ್ದರಿಂದ ನಾವುಗಳು ನಮ್ಮ ದೇಶದ ಪ್ರಾಚೀನ ಸ್ಮಾರಕಗಳನ್ನು ರಕ್ಷಿಸಬೇಕು ಎಂದರು.

ಈ ಸಂದರ್ಭದಲ್ಲಿ ಉಪಪ್ರಾಂಶುಪಾಲ ಸಿ.ಎಸ್.ರಾಮಚಂದ್ರಪ್ಪ, ಸಮಾಜ ವಿಜ್ಞಾನ ಕ್ಲಬ್ ಅಧ್ಯಕ್ಷ ಹನುಮಂತಪ್ಪ, ಕ್ಷೇತ್ರ ಸಮನ್ವಯಾಧಿಕಾರಿ ಇ.ತಿಪ್ಪೇರುದ್ರಪ್ಪ, ಶಿಕ್ಷಣ ಸಂಯೋಜಕ ಕೆ.ಜಿ.ಹರೀಶ್, ಬಿಆರ್‌ಪಿ ಚಿದಾನಂದ, ಇತಿಹಾಸ ಉಪನ್ಯಾಸಕರಾದ ಯೋಗಿರಾಜ್, ಈ.ಪ್ರಕಾಶ್, ಲೀಲಾವತಿ ಇತರರಿದ್ದರು.

**ಫಾಸ್ಟ್ ನ್ಯೂಸ್**

## ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

2023-24ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಯುವ ಜನರಿಗೆ ಅನುಷ್ಠಾನಗೊಳಿಸಲಿರುವ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಜನವರಿ 18 ಅರ್ಜಿ ಸಲ್ಲಿಸಲು ಕೊನೆಯ ದಿನ. ಯುವ ಜನರಿಗಾಗಿ ಪೂರಕವಾದ ಉದ್ಯೋಗಗಳ ವಿಪುಲ ಅವಕಾಶವಿದ್ದು, ಅದರಂತೆ ಪರಿಶಿಷ್ಟ ಜಾತಿ ಯುವಜನರಿಗಾಗಿ ಪ್ರಸಕ್ತ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ ವಿದ್ಯಾರ್ಹತೆ ಹೊಂದಿದ 16 ರಿಂದ 30 ವರ್ಷ ವಯೋಮಿತಿಯವರಿಗೆ 2024ರ ಜನವರಿ 24 ರಿಂದ ಫೆಬ್ರವರಿ 7 ರವರೆಗೆ 15 ದಿನಗಳ ಕಾಲ ಜಿಮ್, ಫಿಟ್ನೆಸ್ ತರಬೇತಿ ಶಿಬಿರ ನಡೆಯಲಿದ್ದು, ತರಬೇತಿಯನ್ನು ಬೆಂಗಳೂರಿನ ಶ್ರೀಜಯಪ್ರಕಾಶ್ ನಾರಾಯಣ ರಾಷ್ಟ್ರೀಯ ಯುವ ತರಬೇತಿ ಕೇಂದ್ರ, ವಿದ್ಯಾನಗರ, ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ತರಬೇತಿ ನಡೆಯಲಿದೆ. ಎಸ್ಎಸ್ಎಲ್‌ಸಿ ಪಾಸ್ ಅಥವಾ ಫೇಲ್ ಆದ 15 ರಿಂದ 29 ವರ್ಷ ವಯೋಮಿತಿಯವರೆಗೆ 2024ರ ಜನವರಿ 24 ರಿಂದ ಫೆಬ್ರವರಿ 7 ರವರೆಗೆ 15 ದಿನಗಳ ಕಾಲ ಬ್ಯೂಟಿಷಿಯನ್ ತರಬೇತಿ ಶಿಬಿರವು ಬೆಂಗಳೂರಿನ ಕುಂಬಳಗೋಡು ತರಬೇತಿ ಕೇಂದ್ರದಲ್ಲಿ ತರಬೇತಿ ನಡೆಯಲಿದೆ. ದ್ವಿತೀಯ ಪಿಯು ವಿದ್ಯಾರ್ಹತೆ ಹೊಂದಿದ 15 ರಿಂದ 29 ವರ್ಷ ವಯೋಮಿತಿಯವರಿಗೆ 2024ರ ಜನವರಿ 27 ರಿಂದ ಫೆಬ್ರವರಿ 7 ರವರೆಗೆ 12 ದಿನಗಳ ವರರೆಗೆ ವೀಡಿಯೋಗ್ರಫಿ ತರಬೇತಿ ಶಿಬಿರವು ಬೆಂಗಳೂರಿನ ಕುಂಬಳಗೋಡು ತರಬೇತಿ ಕೇಂದ್ರದಲ್ಲಿ ತರಬೇತಿ ನಡೆಯಲಿದೆ. ಪದವಿ ಹಾಗೂ ಪತ್ರಿಕೋದ್ಯಮ ಪದವಿ ಪಡೆದ 15 ರಿಂದ 29 ವರ್ಷ ವಯೋಮಿತಿಯವರೆಗೆ 2024ರ ಜನವರಿ 31 ರಿಂದ ಫೆಬ್ರವರಿ 7 ರವರೆಗೆ 8 ದಿನಗಳ ಕಾಲ ನಿರೂಪಣಾ ಮತ್ತು ವಾರ್ತಾ ವಾಚಕರ ತರಬೇತಿ ಶಿಬಿರವು ಬೆಂಗಳೂರಿನ ಯವನಿಕಾ ಸಭಾಂಗಣದಲ್ಲಿ ನಡೆಯಲಿದೆ. ತರಬೇತಿ ಶಿಬಿರಗಳಿಗೆ ಅರ್ಜಿ ಸಲ್ಲಿಸಲು ಪರಿಶಿಷ್ಟ ಜಾತಿಯ ಯುವ ಜನರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯಿಂದ ಅರ್ಜಿ ಪಡೆದು ಜನವರಿ 18 ರೊಳಗೆ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08194-235635 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮನೆ ಕಾಂಪೌಂಡನಲ್ಲಿಯೇ ಗಾಂಜಾ ಗಿಡ, ಅಧಿಕಾರಿಗಳ ಪರಿಶೀಲನೆ: ಆರೋಪಿ ಪರಾರಿ

» **ಮೊದಲ ಪುಟದಿಂದ**

ತಾಲ್ಲೂಕಿನ ತಳಕು ಹೋಬಳಿಯ ಕಾಟಂದೇವರಕೋಟೆ ಗ್ರಾಮದಲ್ಲಿ ಅಕ್ರಮವಾಗಿ ಮದ್ಯಮಾರಾಟ ಮಾಡುಬ ಬಗ್ಗೆ ಸಾರ್ವಜನಿಕವಾಗಿ ದೂರು ಬಂದ ಹಿನ್ನೆಲೆಯಲ್ಲಿ ಗ್ರಾಮದ ಅಂಗಡಿ, ಕಲ್ಯಾಣ ಮಂಟಪ ಮುಂತಾದ ಕಡೆಗಳಲ್ಲಿ ದಾಳಿ ನಡೆಸಿ ಪರಿಶೀಲನೆ ನಡೆಸಲಾಯಿತು ಎಂದು ಅಬಕಾರಿ ಅಧಿಕಾರಿ ನಾಗರಾಜು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಗ್ರಾಮದಲ್ಲಿ ಸಭೆ ನಡೆಸಿ ಅಕ್ರಮ ಮದ್ಯಮಾರಾಟದ ಬಗ್ಗೆ ತಕ್ಷಣವೇ ಮಾಹಿತಿ ನೀಡಬೇಕೆಂದು ಮನವಿ ಮಾಡಿದರು.

## ಇಂದು ಕಾನೂನು ಅರಿವು

» **ಹೊಸದುರ್ಗ**

ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಜ.13 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ರಾಷ್ಟ್ರೀಯ ಯುವಕರ ದಿನದ ಅಂಗವಾಗಿಮ ಕಾನೂನು ಅರಿವು ಕಾರ್ಯಕ್ರಮವನ್ನ ಆಯೋಜಿಸಲಾಗಿದ್ದು ಹೊಸದುರ್ಗ ಸಿವಿಲ್ ನ್ಯಾಯಾಧೀಶರಾದ ಶಿವರಾಜು ಎಚ್.ಎಸ್ ಕಾರ್ಯಕ್ರಮವನ್ನ ಉದ್ಘಾಟಿಸಲಿದ್ದು ಕಾಲೇಜಿನ ಪ್ರಾಂಶುಪಾಲ ಆರ್.ಸುನಿಲ್ ಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ತಾಲೂಕು ವಕೀಲರ ಸಂಘದ ಅಧ್ಯಕ್ಷ ಹೆಚ್.ಬಿ.ರವಿಕುಮಾರ್,ಉಪಾಧ್ಯಕ್ಷ ಜಗದೀಶ್‌ನಾಯ್ಕ್, ಕಾರ್ಯದರ್ಶಿ ಇ.ಟಿ.ರಮೇಶ್, ಪಿಎಸ್ಐ ಮಹೇಶ್‌ಕುಮಾರ್ ವಕೀಲರುಗಳಾದ ಶ್ರೀಮತಿ ಜ್ಯೋತಿ,ಕುಮಾರಿ ಕೆ.ಎಂ.ಸುಮ, ಸೇರಿದಂತೆ ವಕೀಲರುಗಳು ಭಾಗವಹಿಸಲಿದ್ದಾರೆ.

## ಪ್ರಭಾಕರ್‌ಗೆ ಪಿಎಚ್‌ಡಿ ಪದವಿ ಪ್ರದಾನ

» **ಚಿತ್ರದುರ್ಗ**



ಮದಕರಿನಾಯಕ ವಿದ್ಯಾಸಂಸ್ಥೆಯ ಅರ್ಥಶಾಸ್ತ್ರ ಸಹಾಯಕ ಪ್ರಾಧ್ಯಾಪಕ ಪ್ರಭಾಕರ್ ಎಸ್. ಇವರು ಹಂಪಿ ಕನ್ನಡ ವಿಶ್ವವಿದ್ಯಾನಿಲಯುದಿಂದ ಪಿ.ಎಚ್.ಡಿ. ಪದವಿ ಪಡೆದಿದ್ದಾರೆ.ಜಾನಪದ ಅಧ್ಯಯನ ವಿಭಾಗದ ಡಾ.ಹಾರಾಳು ಬುಳ್ಳಪ್ಪರವರ ಮಾರ್ಗದರ್ಶನದಲ್ಲಿ ಪ್ರಭಾಕರ್ ಎಸ್.ರವರು ಕೃಷಿ ಮಾರುಕಟ್ಟೆ ಮೇಲೆ ಜಾಗತೀಕರಣದ ಪ್ರಭಾವ ಎಂಬ ವಿಷಯಕ್ಕೆ ಮಂಡಿಸಿರುವ ಮಹಾ ಪ್ರಬಂಧಕ್ಕೆ ಪಿ.ಎಚ್.ಡಿ. ಪದವಿ ಲಭಿಸಿದೆ. ಪ್ರಭಾಕರ್ ಎಸ್. ಇವರ ಸಾಧನೆಗೆ ಜಿಲ್ಲಾ ಮದಕರಿನಾಯಕ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಸಂದೀಪ್ ಎಸ್. ರವರು ಅಭಿನಂದಿಸಿದ್ದಾರೆ.

### ಚಿತ್ರದುರ್ಗ ಜಿಲ್ಲಾ ಗಂಗಾಂಬಿಕಾ ಬೆಸ್ತರ ಸಂಘದ ಸಭೆ ತೀರ್ಮಾನ

# ಗಂಗಾಪರಮೇಶ್ವರಿ ವಿಗ್ರಹ ಪ್ರತಿಷ್ಠಾಪನೆಗೆ ಒಪ್ಪಿಗೆ

» **ಚಿತ್ರದುರ್ಗ**




ಕನ್ನಡ ಮತ್ತು ಸಂಸ್ಕೃತಿ ಹಾಗೂ ಚಿತ್ರದುರ್ಗ ಜಿಲ್ಲಾ ಗಂಗಾಂಬಿಕಾ ಬೆಸ್ತರ ಸಂಘದವತಿಯಿಂದ ಪ್ರತಿ ವರ್ಷ ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಅವರ ಜಯಂತಿಯನ್ನು ಸರಳ ಅದ್ದೂರಿಯಗಿ ಆಚರಿಸಲಾಗುತ್ತಿದ್ದು ಈ ಭಾರಿ ಸರಳವಾಗಿ ಆಚರಿಸಲಾಗುವುದು. ಫೆಬ್ರವರಿಯಲ್ಲಿ ನವೀಕೃತ ಸಂಘದ ಕಟ್ಟಡದಲ್ಲಿ ಶ್ರೀ ಗಂಗಾಪರಮೇಶ್ವರಿ ಅಮ್ಮನವರ ಶಿಲಾವಿಗ್ರಹ ಪ್ರತಿಷ್ಠಾಪನೆ ಮತ್ತು ಶ್ರೀ ಗಂಗಾಂಬಿಕಾ ಸಮುದಾಯ ಭವನದ ಉದ್ಘಾಟನೆಯನ್ನು ಅದ್ದೂರಿಯಾಗಿ ಆಚರಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ನಗರದ ಮದಕರಿ ವೃತ್ತ, ರಂಗಯ್ಯನ ಬಾಗಿಲು ಬಳಿಯ ಚಿತ್ರದುರ್ಗ ಜಿಲ್ಲಾ ಗಂಗಾಂಬಿಕಾ ಬೆಸ್ತರ ಸಂಘದಲ್ಲಿ ಜ.09ರ ಮಂಗಳವಾರ ಅಧ್ಯಕ್ಷರಾದ ಹೆಚ್.ಡಿ.ರಂಗಯ್ಯರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸದಸ್ಯರು ಹಾಗೂ ಪದಾಧಿಕಾರಿಗಳು ಚರ್ಚೆಯಲ್ಲಿ ಭಾಗವಹಿಸಿ ತಮ್ಮ ಅನಿಸಿಕೆಯನ್ನು ಹಂಚಿಕೊಂಡರು. ನಂತರ ಅಧ್ಯಕ್ಷರು ಮಾತನಾಡಿ, ಹಿರಿಯರು ಸಂಘ ಸ್ಥಾಪಿಸಲು 40 ವರ್ಷದಿಂದ ಶ್ರಮಿಸಿದವರು, ಕಳೆದ ಅವದಿಯಲ್ಲಿ ಸಂಘ ದಿವಾಳಿಯಾಗಿತ್ತು ಲೆಖ್ಖಪತ್ರ ಕೊಟ್ಟಿಲ್ಲ, ನಾನು ಸಂಘದ ನಿರ್ದೇಶಕನಾಗಿದ್ದೆ ಸಂಘದಲ್ಲಿ ದುಡ್ಡಿಲ್ಲ ಲೆಖ್ಖಪತ್ರವಿಲ್ಲದೆ ನಡೆದಿದ್ದ ಸಂಘ ನಾನು ಅಧ್ಯಕ್ಷನಾಗಿ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಎರಡನೆ ಮಹಡಿಯಲ್ಲಿ ವಿದ್ಯಾರ್ಥಿಗಳಿಗೆ 8 ರೂಂಗಳನ್ನು ಕಟ್ಟಿದ್ದೆವು ಮಕ್ಕಳಿಗೆ ಹತ್ತಲು ತೊಂದರೆ ಕಾರಣ ಬೇರೆಡೆ ಜಮೀನು ಪಡೆಯಲು ಶ್ರಮಿಸುತ್ತಿದೆ.

ಸಂಘದ ಕಟ್ಟಡದಲ್ಲಿ ರೂ. 1.25 ಲಕ್ಷ ಬಾಡಿಗೆ ಕೊಟ್ಟಿದೆ. ಸಂಘದ ನವೀಕೃತ ಕಟ್ಟಡ ಉದ್ಘಾಟನೆ ಸಿದ್ದವಾಗಿದೆ. ಸಂಘಕ್ಕೆ ಮರು ಜೀವ ತುಂಬಲು ಈ ಹಿಂದ ಸದಸ್ಯರ ಸಂಖ್ಯೆಯನ್ನು 400 ಹೆಚ್ಚು ಮಾಡಿ ಮುಂದಿನ ದಿನದಲ್ಲಿ ಸಂಘ ಅಧಿಕಾರ ಪಡೆಯಲು ಅನುವುಮಾಡಿಕೊಟ್ಟಿದ್ದೇವೆ. ಐದು ತಾಲ್ಲೂಕು ಸೇರಿದ ಜಿಲ್ಲಾ ಸಂಘವಾಗಿದ್ದು ತಾಲ್ಲೂಕು ಕಮಿಟಿ ಮಾಡಲು ಅವಕಾಶ ಮಾಡಿದ್ದೇವೆ.

ಸಂಘದ ಸ್ಥಳದಲ್ಲಿ ಗಂಗಾಪರಮೇಶ್ವರಿ ಅಮ್ಮನವರ ಶಿಲಾ ಪ್ರತಿಮೆ ರೂ. 80ಸಾವಿರ ವೆಚ್ಚದಲ್ಲಿನಿರ್ಮಾಣಮಾಡಲಾಗಿದೆಅದನ್ನು ಪ್ರತಿಸ್ಥಾಪಿಸಲಾಗುವುದು. ಬರುವ ದಿನಗಳಲ್ಲಿ ಸರ್ವಸದಸ್ಯರ ಸಭೆ ಕರೆಯಲಿದ್ದು ಅದರಲ್ಲಿ ಎಲ್ಲರೂ ಭಾಗವಹಿಸಿ ಮುಂದಿನ ಅವದಿಗೆ ಅಧಿಕಾರ ಹಸ್ತಾಂತರಿಸಲಾಗುವುದು ಎಂದು ರಂಗಯ್ಯರವರು ಸಭೆಗೆ ತಿಳಿಸಿದರು.

ಈ ಕಾರ್ಯಕ್ರಮಕ್ಕೆ ರಾಜಕಾರಣಿಗಳು ಜಿಲ್ಲಾ ಮಂತ್ರಿ ಶಾಸಕರು ಕರೆಸಿ ಗೌರವಿಸುವ ಕೆಲಸ ಮಾಡುತ್ತೇವೆ. ಕಾರ್ಯಕ್ರಮ ರೂಪರೇಷೆ ಬಗ್ಗೆ ಸಲಹೆ ಸೂಚನೆ ನೀಡಲು ಸಂಘದ ಅಧ್ಯಕ್ಷರು ಶೀಘ್ರ ಸಭೆ ಕರೆಯುವುದಾಗಿ ತಿಳಿಸಿದರು.

ಸಂಘದ ಉಪಾಧ್ಯಕ್ಷರಾದ ಕೃಷ್ಣಮೂರ್ತಿಯವರು ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘದ ಅಭಿವೃದ್ಧಿ ಬಗ್ಗೆ ಲೆಕ್ಕಪತ್ರ, ನವೀಕೃತ ಸಂಘದ ಕಟ್ಟಡ ಉದ್ಘಾಟನೆ ಬಗ್ಗೆ ಪಕ್ಷಾತೀತವಾಗಿ ರಾಜಕಾರಣಿಗಳನ್ನು ಆಹ್ವಾನಿಸಿ ಸನ್ಮಾನಿಸುವ ಬಗ್ಗೆ ಚರ್ಚೆ ಮಾಡಬೇಕಿದೆ. ಈಭಾರೀ ಶ್ರೀ ಅಂಬಿಗರ ಚೌಡಯ್ಯ, ಜಯಂತಿ ಸರಳ ಆಚರಣೆ ಮಾಡುವ ಬಗ್ಗೆ ತೀರ್ಮಾನಿಸಬೇಕಿದೆ.ಈ ಬಗ್ಗೆ ಜಿಲ್ಲಾಧಿಕಾರಿಗಳು ಇಂದು ಸಭೆಯಲ್ಲಿ ತೀರ್ಮಾನಿಸಲಾಯಿತು. ನಂತರ ಮಾತನಾಡಿ ಸಭೆಯಲ್ಲಿ ಸಂಘದ ನವೀಕೃತ ಕಟ್ಟಡದ ಸಮಾರಂಭದ ಬಗ್ಗೆ ಮಾಹಿತಿ ಹಂಚಿಕೊಂಡು ತೀರ್ಮಾನಿಸಬೇಕಿದೆ ಎಂದು ಸಭೆಯಲ್ಲಿ ಮಾಹಿತಿ ಹಂಚಿಕೋಂಡರು.

ಚರ್ಚೆಯಲ್ಲಿ ಬೆಸ್ತ ನೌಕರರ ಸಂಘದ ಮಾಜಿ ಅಧ್ಯಕ್ಷರಾದ ರಾಮಸ್ವಾಮಿ ಮಾತನಾಡಿ ಫೆಬ್ರವರಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಜಿಲ್ಲಾ ಸಮಾವೇಶ ನಡೆಸಬೇಕು, ಸಂಘದಲ್ಲಿ ದುಡಿದವರಿಗೆ ಸನ್ಮಾನ ಮಾಡಬೇಕು. ಸಾಲ ಕೊಟ್ಟವರಿಗೆ ಸಂಘದ ಅಡಿಯಲ್ಲಿ ಸಾಲ ಕೊಟ್ಟಿರುವವರಿಗೆ ತೀರಿಸಲು ಬ್ಯಾಂಕ್ ಸಾಲಮಾಡಿ ಅವರ ಸಾಲ ತೀರಿಸಿ ಸಂಘ ಋಣ ಮುಕ್ತರಾಗಿ ನಡೆಯಲಿ ಎಂದು ತಮ್ಮ ಅನಿಸಿಕೆ ಹಂಚಿಕೊಂಡರು. ನಗರಸಭಾ ಮಾಜಿ ಸದಸ್ಯ ಗಾಡಿ ಮಂಜುನಾಥ್ ಮಾತನಾಡಿ ಸಂಘದ ಅಭಿವೃದ್ಧಿ ಬಗ್ಗೆ ಚರ್ಚೆ ಮಾಡಿದರು. ಸಂಘದ ಹಿರಿಯರಾದ ಕೆಂಚಪ್ಪ ಮಾತನಾಡಿ, ಸಂಘದ ಸಾದನೆಗೆ ಅಭಿನಂದಿಸಿದರು.

ಮಾಜಿ ನಗರಸಭಾ ಸದಸ್ಯರಾದ ಮಹೇಶ್ ಮಾತನಾಡಿ, ಈಗಿನ ಸಂಘದ ಕಟ್ಟಡ ಜನ ತಿರಿಗಿ ನೋಡುವ ರೀತಿ ನಿರ್ಮಾಣ ಮಾಡಿದ್ದು, ಅದೇ ರೀತಿ ಗಂಗಪರಮೇಶ್ವರಿ ದೇವಸ್ಥಾನದ ಜಬಾಬ್ದಾರಿ ವಹಿಸಿಕೊಂಡು ಹೋಗಲು ಇರುವ ಕಮಿಟಿಗೆ ಮನವಿ ಮಾಡಿದರು.ಥಳಕು ಶಿವಾನಂದ್ ಮಾತನಾಡಿ ನಾನು ಇಲ್ಲೆ ಓದಿ ಡಿಗ್ರಿ ಪಡೆದಿದ್ದೇನೆ. ಆ ಸಂಘ ಅಭಿವೃದ್ಧಿಯಲ್ಲಿ ಸಾಗಿರುವುದು ಹೆಮ್ಮೆ ಅನಿಸುತ್ತದೆ, ಸಂಘದ ಅಭಿವೃದ್ಧಿಗೆ ಬೆಂಬಲ ವ್ಯಕ್ತಪಡಿಸಿ. ಸಂಘದ ಕೆಲಸದಲ್ಲಿ ಕೈಜೋಡಿಸಬೇಕಿದೆ ಎಂದರು.

ಬೆಸ್ತ ನೌಕರರ ಸಂಘದ ಕಾರ್ಯದರ್ಶಿ ಅಂಜನಮುರ್ತಿ ಮಾತನಾಡಿ, ಸಂಘದ ಕಟ್ಟಡವಾಗಿದೆ. ಸಾಕಷ್ಟು ನಮ್ಮ ಜನ ಉತ್ತಮ ಪಡಿಸಲು ಸಂಘದ ಹಾಸ್ಟೆಲ್ ಕಟ್ಟಲು ಹತ್ತಿರದಲ್ಲಿ ಜಮೀನು ಖರೀದಿಸಬೇಕಿದೆ. ಈ ಸಂದರ್ಭಕ್ಕೆ ರಾಜಕಾರಣಿಯವರನ್ನು ಬಳಸಿಕೊಳ್ಳಬೇಕಿದೆ. ಸಂಘದ ನಿರ್ದೇಶನಕ್ಕೆ ಅಭಿವೃದ್ಧಿಗೆ ಕಾರ್ಯಪಡೆ ಸಿದ್ದರಾಗಬೇಕಿದೆ ಎಂದರು.

ಸಂಘದ ಉಪಾಧ್ಯಕ್ಷ ಕರಿಯಪ್ಪ ಮಾತನಾಡಿ, ನವೀಕೃತ ಸಂಘದ ಉದ್ಘಾಟನೆ ವ್ಯವಸ್ಥಿತವಾಗಿ ನಡೆಯಲು ಎಲ್ಲರೂ ಕೈಜೋಡಿಸಬೇಕಿದೆ ಎಂದರು.

ಭೀಮಸಮುದ್ರದ ಚಂದ್ರು ಮಾತನಾಡಿ, ನಾನದೀ ಸಂಘದ ಕಟ್ಟಡದಲ್ಲಿ ವ್ಯಾಸಂಗಮಾಡಿದ್ದೇನೆ ಸಂಘದ ಜಾಗಕ್ಕೆ ಸಾಕಷ್ಟು ದುಡಿದಿದ್ದಾರೆ ಅದನ್ನು ಮುಂದುವರೆಯುತ್ತಿರುವುದಕ್ಕೆ ಹೆಮ್ಮೆ ಎನಿಸುತ್ತದೆ. ನಮ್ಮ ಜನಾಂಗದ ಅಭಿವೃದ್ಧಿಗೆ ಸುತ್ತಿಲಿನ ಮೀನು ಸಾಕಾಣಿಕೆಗೆ ಕೆರೆಗಳನ್ನು ಗುತ್ತಿಗೆ ನೀಡುವಾಗ ನಮ್ಮವರಿಗೆ ಪ್ರಥಮ ಆದ್ಯತೆಗೆ ಅವಕಾಶ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಬೇಕಿದೆ.

ಹಿರಿಯೂರು ತಾಲ್ಲೂಕು ಅಧ್ಯಕ್ಷ ಗಂಗಾಧರ ಮಾತನಾಡಿ, ವ್ಯವಸ್ಥಿತವಾಗಿ ಸಂಘ ನಡೆಯುವ ನಿಟ್ಟಿನಲ್ಲಿ ಕೆಲಸ ಆಗಬೇಕಿದೆ. ನಮ್ಮ ಸಮಾಜದ ಕಟ್ಟೆ ಕಡೆಯ ನಮ್ಮವರಿಗೆ ಸಂಘದ ಮಾಹಿತಿ ತಲುಪುವ ರೀತಿಯಲ್ಲಿ ಸಂಘದ ನಾವು ಪ್ರತಿ ಗ್ರಾಮ ಹಳ್ಳಿಗಳಲ್ಲಿ ತಿರುಗಿ ಸಂಘಟನೆ ಮಾಡಿದಾಗ ಮಾತ್ರ ನಮ್ಮವರು ಬೆಳೆಯಲು ಸಾದ್ಯ, ಮುಂದಿನ ದಿನದಲ್ಲಿ ಥಳಮಟ್ಟದಲ್ಲಿ ಸಂಘಟನೆ ಮಾಡಬೇಕಿದೆ ಎಂದು ಸಭೆಯಲ್ಲಿ ಮಾಹಿತಿ ಹಂಚಿಕೊಂಡರು.

ಸಂಘದ ನಿರ್ದೇಶಕ ರವಿಕುಮಾರ ಮಾತನಾಡಿ, 72ರಲ್ಲಿ ಸಂಘ ಸ್ಥಾಪನೆ ಆಗಿದ್ದು ಅಧ್ಯಕ್ಷರಾಗಿದ್ದ ಬುಡ್ಡಪ್ಪ ಅವದಿಯಲ್ಲಿ ಕೆಎಸ್‌ಎಫ್‌ಸಿಯಲ್ಲಿ ಸಾಲ ತೆಗೆಯಲು ವ್ಯವಸ್ಥೆಯಾಗಿತ್ತು ಸಮಾಜ ಮುಂದೆ ಬರಲಿಲ್ಲ, ಆ ರೀತಿ ಆಗಿದ್ದು ಬಿಟ್ಟರೆ ಸಂಘದಲ್ಲಿ ಯಾವುದೇ ಅವ್ಯವಹಾರವಾಗಿಲ್ಲವೆಂದರು. ಕಾರ್ಯ ಸಾದ್ಯವಾಗಲಿಲ್ಲ ಅಷ್ಟೆ. ಸಂಘದ ಈಗಿನ ಅಧ್ಯಕ್ಷರಿಗೆ ಹಿಂದಿನ ಅವಧಿಯಲ್ಲಾದ ಸಮಸ್ಯೆಯನ್ನು ಸಭೆಗೆ ತಿಳಿಸಿದರು.

ವೇದಿಕೆಯಲ್ಲಿ ಉಪಾಧ್ಯಕ್ಷರಾದ ದೊರೆಸ್ವಾಮಿ, ಖಜಾಂಚಿ, ರಂಗಪ್ಪ, ಗೌ.ಅಧ್ಯಕ್ಷರಾದ ಸಿ.ಕೆ.ತ್ಯಾಗರಾಜ್, ಹಿರಿಯೂರು ತಾಲ್ಲೂಕು ಅಧ್ಯಕ್ಷರಾದ ಗಂಗಾದರ, ಚಳ್ಳಕೆರೆ ಥಳಕು ಕೆಇಬಿ ನಿವೃತ್ತ ಜೂನಿಯರ್ ಇಂಜಿನಿಯರ್ ತಿಪ್ಪೇರುದ್ರಪ್ಪ, ಹೊಳಲ್ಕೆರೆ ತಾಲ್ಲೂಕು ಅಧ್ಯಕ್ಷರಾದ ರಮೇಶ್, ಥಳಕು ಶಿವಾನಂದಅವರುಗಳು ಸಂಘದ ಸದಸ್ಯರು ಹಾಗೂ ಬ್ರಹ್ಮಗಿರಿ ಪತ್ರಿಕೆಯ ಸಂಪಾದರಾದ ಎಸ್.ಶ್ರೀನಿವಾಸ ಉಪಸ್ಥಿತರಿದ್ದರು.

ಮೊದಲಿಗೆ ಪಾರ್ಥನೆಯನ್ನು ಸಂಘದ ಹಿರಿಯರಾದ ಕೆಂಚಪ್ಪ ಮಾಡಿದರೆ ನೌಕರರ ಸಂಘದ ಅಧ್ಯಕ್ಷರಾದ ಹನುಮಂತಪ್ಪರವರು ಎಲ್ಲರನ್ನು ಸ್ವಾಗತಿಸಿದರು. ಕೊನೆಯಲ್ಲಿ ಲೀಲಾವತಿಯವರು ವಂದನಾರ್ಪಣೆಯೊಂದಿಗೆ ಸಭೆ ಮುಕ್ತಾಯವಾಯಿತು. ಕಾರ್ಯಕ್ರಮ ನಿರೂಪಣೆಯನ್ನು ನಾಗರಾಜ್ ನಡೆಸಿಕೊಟ್ಟರು.

# ನಗರಸಭೆಯ ಪೌರಕಾರ್ಮಿಕರಿಗೆ 4 ಲಕ್ಷ ವೆಚ್ಚದಲ್ಲಿ ಮನೆ ಸಾಮಾಗ್ರಿ ವಿತರಣೆ: ಸಿ.ಚಂದ್ರಪ್ಪ

» **ಚಳ್ಳಕೆರೆ**

ನಗರಸಭೆಯಲ್ಲಿ ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುತ್ತಿರುವ 90 ನೌಕರರಿಗೆ ಅಂದಾಜು ನಾಲ್ಕು ಲಕ್ಷ ಮೌಲ್ಯದ ಮನೆ ಸಾಮಾಗ್ರಿಗಳನ್ನು ಪೌರಾಯುಕ್ತ ಸಿ.ಚಂದ್ರಪ್ಪ ವಿತರಿಸಿದರು. ಈ ಬಗ್ಗೆ ಮಾಹಿತಿ ನೀಡಿದ ಅವರು, 2022-23ನೇ ಸಾಲಿನ ಎಸ್‌ಸಿಎಸ್‌ಪಿ ಯೋಜನೆಯಡಿ ಪೌರಕಾರ್ಮಿಕರಿಗೆ ದಿನಬಳಕೆಯ ಅಡಿಗೆ ಸಾಮಾಗ್ರಿಗಳನ್ನು ನೀಡಲಾಯಿತು. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಕಳೆದ ವಾರವಷ್ಟೇ ಪ್ರಾಯೋಗಿಕವಾಗಿ ಪೌರಕಾರ್ಮಿಕರಿಗೆ ಸಾಮಾಗ್ರಿಗಳನ್ನು ವಿತರಿಸಿ ಯೋಜನೆಗೆ ಚಾಲನೆ ನೀಡಿದ್ದರು. ಮುಂದುವರೆದ ಭಾಗವಾಗಿ ಇಂದು ಎಲ್ಲಾ ಪೌರಕಾರ್ಮಿಕರಿಗೆ ಮನೆಯ ಸಾಮಾಗ್ರಿ ನೀಡಲಾಯಿತು ಎಂದರು. ನೈರ್ಮಲ್ಯ ಇಂಜಿನಿಯರ್ ನರೇಂದ್ರಬಾಬು, ಆರೋಗ್ಯ ನಿರೀಕ್ಷಕರಾದ ಗಣೇಶ್, ಗೀತಾಕುಮಾರಿ, ದಾದಾಪೀರ್, ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ, ಸದಸ್ಯರಾದ ಟಿ.ಮಲ್ಲಿಕಾರ್ಜುನ್, ವಿ.ವೈ.ಪ್ರಮೋದ್ ಮುಂತಾದವರು ಉಪಸ್ಥಿತರಿದ್ದರು.



**ಚಳ್ಳಕೆರೆ ನಗರಸಭೆಯ ಪೌರಕಾರ್ಮಿಕರಿಗೆ ವಿವಿಧ ಸಾಮಾಗ್ರಿಗಳನ್ನು ಪೌರಾಯುಕ್ತ ಟಿ. ಚಂದ್ರಪ್ಪ ವಿತರಿಸಿದರು.**

## ಪತ್ನಿ ಸಾತ್‌ನಿಂದ ಪಿ.ಹೆಚ್.ಡಿ. ಪದವಿ ಮುಗಿಸಿದ ನಾಗೇಶ



» **ನಾಯಕನಹಟ್ಟಿ**

ಪತ್ನಿ ಸಾತ್‌ನಿಂದ ಪಿ.ಹೆಚ್.ಡಿ. ಪದವಿ ಮುಗಿಸಿದ ತೊರೆಕೋಲಮ್ಮನಹಳ್ಳಿ ನಾಗೇಶ ಹ್ ೂ ೀ ಬ ಳಿ ಂ ು ್ ು ತೊರೆಕೋಲಮ್ಮನಹಳ್ಳಿ ಗ್ರಾಮದ ಗ್ರಾಮೀಣ ಪ್ರದೇಶದ ಸಾಮಾನ್ಯ ಅತ್ಯಂತ ಬಡ ಕುಡುಂಬದಲ್ಲಿ ಜನಿಸಿದ ಒಬ್ಬನೇ ಮಗನಾದ ನಾಗೇಶರವರು ಪಿ.ಹೆಚ್.ಡಿ. ಪದವಿ ಅಧ್ಯಯನದ ವಿಷಯ ಕನ್ನಡ ಭಾಷೆ ಅಭ್ಯಾಸ ಪುಸ್ತಕಗಳ ಭಾಷಿಕ ಮತ್ತು ಶೈಕ್ಷಣಿಕ ಅಧ್ಯಯನ ಕನ್ನಡ ವಿಶ್ವವಿದ್ಯಾಲಯ ಹಂಪಿ ಮಾರ್ಗದರ್ಶಕರು ಡಾ.ಅಶೋಕ್‌ಕುಮಾರ್ ರಂಜೇರೆ, ಕುಲಪತಿಗಳಾದ ಡಾ. ವಿ. ಪರಮಶಿವಮೂರ್ತಿ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್‌ರವರು ಪಿ.ಹೆಚ್.ಡಿ. ಪದವಿಯನ್ನು ಪ್ರಧಾನ ಮಾಡಿದರು. ಅವರ ಪೋಷಕರಾದ ಬಸವರಾಜ್, ತಿಪ್ಪಮ್ಮ ಪತ್ನಿ ಯಶೋಧ ಇವರುಗಳಿಗೆ ದೇವರು ಆರೋಗ್ಯ, ಆಯಸ್ಸು ಹೆಚ್ಚಿಸಲಿ ಎಂದು ಅವರ ಚಿಕ್ಕಪ್ಪರಾದ ಆರ್. ಬಸಪ್ಪನವರು ಹುಡುಗನ ತಂದೆ-ತಾಯಿಗಳಿಗೆ ತೊರೆಕೋಲಮ್ಮನಹಳ್ಳಿ ಗ್ರಾಮಸ್ಥರು, ಅಬ್ಬೇನಹಳ್ಳಿ ಪಂಚಾಯಿತಿ ಅಧ್ಯಕ್ಷರು ಮತ್ತು ಸದಸ್ಯರು ಅಭಿನಂದನೆ ಸಲ್ಲಿಸಿದರು.

## ಇಂದು ವಿದ್ಯುತ್ ವ್ಯತ್ಯಯ

**ದಾವಣಗೆರೆ:** ಘಟಕ-02 ಶಾಖಾ ವ್ಯಾಪ್ತಿಯಲ್ಲಿ ತುರ್ತು ನಿರ್ವಹಣಾ ಕಾಮಗಾರಿಗಳು ಇರುವುದರಿಂದ ಜ.12 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಅವರಗೆರೆ, ಬಾಡ ಕ್ರಾಸ್, ಆಂಜನೇಯ ಕಾಟನ್ ಮಿಲ್, ಎಚ್.ಕಲಪನಹಳ್ಳಿ, ಹೊನ್ನೂರು, ಹೊನ್ನೂರು ಗೊಲ್ಲರಹಟ್ಟಿ, ಮಲ್ಲಶೆಟ್ಟಿಹಳ್ಳಿ, ಕರಿಲಕ್ಕೆನಹಳ್ಳಿ, ಚಟ್ಟೋಬನಹಳ್ಳಿ ಐಸಾಪುರ, ಹೊಸಚಿಕ್ಕನಹಳ್ಳಿ ವಡ್ಡಿನಹಳ್ಳಿ, ಐಗೂರು, ಐಗೂರು ಗೊಲ್ಲರಹಟ್ಟಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

**ಪ್ರಮುಖ ಸುದ್ದಿ**

# ಜ.17 ರಂದು ಭೂಮಿ ಹಕ್ಕು ನೀಡುವಂತೆ ಸಮಾವೇಶ

» **ಚಿತ್ರದುರ್ಗ**



ತಾಲ್ಲೂಕಿನಲ್ಲಿರುವ ಬಗರ್‌ಹುಕುಂ ಸಾಗುವಳಿದಾರರಿಗೆ ಭೂಮಿ ಹಕ್ಕು ನೀಡಬೇಕೆಂದು ಸರ್ಕಾರವನ್ನು ಒತ್ತಾಯಿಸಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯಿಂದ ಜ.17 ರಂದು ಜಿಲ್ಲಾಧಿಕಾರಿ ಕಚೇರಿ ವೃತ್ತದಲ್ಲಿ ಸಾಗುವಳಿದಾರರ ಸಮಾವೇಶವನ್ನು ನಡೆಸಲಾಗುವುದೆಂದು ಸಮಿತಿಯ ರಾಜ್ಯ ಕಾರ್ಯದರ್ಶಿ ಕುಮಾರ್ ಸಮತಳ ತಿಳಿಸಿದರು.ಪತ್ರಕರ್ತರ ಭವನದಲ್ಲಿ ಗುರುವಾರ ಸುದ್ದಿಘೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯಾದ್ಯಂತ ಭೂಮಿ ಸಾಗುವಳಿದಾರರಿದ್ದಾರೆ. ಪ್ರತಿಯೊಬ್ಬರಿಗೂಹಕ್ಕುಪತ್ರಕೊಡಬೇಕೆಂದು ಸರ್ಕಾರವನ್ನು ಆಗ್ರಹಿಸುವುದಕ್ಕಾಗಿ ನಡೆಯಲಿರುವ ಸಮಾವೇಶದಲ್ಲಿ ಸ್ಥಳೀಯ ಶಾಸಕರು ಹಾಗೂ ವಿವಿಧ ಸಂಘಟನೆಗಳ ಮುಖಂಡರುಗಳು ಭಾಗವಹಿಸಲಿದ್ದಾರೆ. ಬಗರ್ ಹುಕುಂ ಸಾಗುವಳಿದಾರರು ಹೆಚ್ಚಿನ ಸಂಖ್ಯೆಯಲ್ಲಿ ಸಮಾವೇಶಕ್ಕೆ ಆಗಮಿಸುವಂತೆ ಮನವಿ ಮಾಡಿದರು.

ಹಕ್ಕುಪತ್ರಕ್ಕಾಗಿ ಜಿಲ್ಲೆಯಲ್ಲಿ ಒಂದು ಲಕ್ಷ ಇಪ್ಪತ್ತು ಸಾವಿರ ಅರ್ಜಿಗಳನ್ನು ಸಲ್ಲಿಸಲಾಗಿದೆ. ಅರಣ್ಯ ಹಕ್ಕು ಕಾಯಿದೆಯಡಿ ಸಲ್ಲಿಸಿರುವ ಅರ್ಜಿಗಳನ್ನು ಪರಿಗಣಿಸಬೇಕು. ಕೆಲವು ಗೊಂದಲಗಳಿರುವುದರಿಂದ ಮೇ. 18 ರಂದು ರಾಜ್ಯದ ಮುಖ್ಯಮಂತ್ರಿ ಜೊತೆ ಸಭೆ ನಡೆಸಿ ಸಾಗುವಳಿದಾರರಿಗೆ ಹಕ್ಕುಪತ್ರಗಳನ್ನು ನೀಡುವಂತೆ ಗಮನ ಸೆಳೆಯಲಾಗುವುದು. ಚಿತ್ರದುರ್ಗ ಶಾಸಕರು ಹಾಗೂ ಜಿಲ್ಲಾಧಿಕಾರಿಗಳು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಹಕ್ಕುಪತ್ರಗಳನ್ನು ವಿತರಿಸಬೇಕು. ಯಾರ ಅರ್ಜಿಯನ್ನು ನಿರ್ಲಕ್ಷಿಸಬಾರದು. ಪ್ರತಿ ವಾರಕ್ಕೊಮ್ಮೆ ತಹಶೀಲ್ದಾರ್ ಸಭೆ ಕರೆದು ಸಮಸ್ಯೆಗಳ ಕುರಿತು ಚರ್ಚಿಸಬೇಕೆಂದು ಸರ್ಕಾರ ಸುತ್ತೋಲೆ ಹೊರಡಿಸಿದೆ. ಆದರೆ ಇದುವರೆವಿಗೂ ಒಂದು ಸಭೆಯೂ ನಡೆದಿಲ್ಲವೆಂದು ಕುಮಾರ್ ಸಮತಳ ಆಪಾದಿಸಿದರು. ಸರ್ಕಾರಿ ಹಾಗೂ ಇತರೆ ಭೂಮಿಗಳಲ್ಲಿ ಸಾಗುವಳಿ ಮಾಡುತ್ತ ಫಾರಂ ನಂ 50, 53 ಹಾಗೂ 57 ರಲ್ಲಿ ಸಲ್ಲಿಸಿರುವ ಅರ್ಜಿದಾರರಿಗೆ ಭೂಮಿಗಳ ಮಂಜೂರಾತಿ ನೀಡಬೇಕು.ಜಿಲ್ಲೆಯಲ್ಲಿ ಅರಣ್ಯ ಹಾಗೂ ಕಂದಾಯ ಭೂಮಿಗಳ ವಿಂಗಡಣೆ ಮಾಡಿ ಸರ್ವೆ ಮಾಡುವ ಮೂಲಕ ಗೊಂದಲ ನಿವಾರಿಸಬೇಕು. ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವವರಿಗೆ ಅರಣ್ಯ ಹಕ್ಕು ಕಾಯ್ದೆಯನ್ವಯ ಭೂಮಿ ಮಂಜೂರು ಮಾಡಬೇಕು.94 ಸಿ, 94 ಸಿಸಿ. ಅರ್ಜಿಗಳನ್ವಯ ಮತ್ತು ವಸತಿಗಾಗಿ ಅರ್ಜಿ ಸಲ್ಲಿಸಿದ ಎಲ್ಲರಿಗೂ ಹಾಗೂ ವಸತಿ ರಹಿತರಿಗೆ ನಿವೇಶನ ಮತ್ತು ಮನೆಗಳ ಮಂಜೂರಾತಿ ನೀಡಲು ಕ್ರಮ ಜರುಗಿಸಬೇಕು.ಬಡವರನ್ನು ಭೂಮಿಯಿಂದಾಗಲಿ, ವಾಸಿಸುವ ಜಾಗದಿಂದಾಗಲಿ ಒತ್ತುವರಿ ಹೆಸರಿನಲ್ಲಿ ಒಕ್ಕಲೆಬ್ಬಿಸಬಾರದು. ಅನಿವಾರ್ಯವಾಗಿದ್ದರೆ ಪರ್ಯಾಯ ವ್ಯವಸ್ಥೆ ಕಲ್ಪಿಸದೆ ಕ್ರಮ ಕೈಗೊಳ್ಳಬಾರದು.

ಭೂಮಿ-ವಸತಿ ಮಂಜೂರಾತಿಗಳು ಕಾಲ ಮಿತಿಯೊಳಗೆ ಬಗೆಹರಿಯಬೇಕು.

ಈ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸುವುದಕ್ಕಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯವರನ್ನು ಒಳಗೊಂಡಂತೆ ಸಂಬಂಧಪಟ್ಟ ಅಧಿಕಾರಿಗಳ ಸಭೆ ಕರೆಯುವಂತೆ ಕುಮಾರ್ ಸಮತಳ ಒತ್ತಾಯಿಸಿದರು.ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯ ಜಿಲ್ಲಾ ಮುಖಂಡ ಸತ್ಯಪ್ಪ ಮಲ್ಲಾಪುರ, ಹನುಮಂತಣ್ಣ ಗೋನೂರು, ಕರಿಯಪ್ಪ ಈಚಘಟ್ಟ, ಈರಜ್ಜ, ಸುನಂದಮ್ಮ, ಹೆಚ್. ವೆಂಕಟೇಶ್ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಶತಾಯುಷಿ ಮಡಿವಾಳರ ಹನುಮಮ್ಮ ನಿಧನ

» ಅಜ್ಜಂಪುರ



ಚಿಕ್ಕಮಗಳೂರು ಜಿಲ್ಲೆ ಅಜ್ಜಂಪುರ ಪಟ್ಟಣದ ಅಂಬೇಡ್ಕರ್ ಬಡಾವಣೆಯ ನಿವಾಸಿ ಲೇ.ಈರದಿಮ್ಮಪ್ಪ ನವರ ಪತ್ನಿ ಶತಾಯುಷಿ ಮಡಿವಾಳರ ಹನುಮಮ್ಮ (103) ಅವರು ಅವರ ಪುತ್ರ ಇ.ಓ ಓಂಕಾರಪ್ಪ ಅವರ ನಿವಾಸದಲ್ಲಿ ಬುಧವಾರ ನಿಧನರಾದರು. ಮೃತರಿಗೆ ನಾಲ್ಕು ಗಂಡು ಹಾಗೂ ನಾಲ್ಕು ಮಂದಿ ಹೆಣ್ಣು ಮಕ್ಕಳಿದ್ದಾರೆ. ಮೃತರ ಅಂತ್ಯಕ್ರಿಯೆಯು ಅಜ್ಜಂಪುರ ಪಟ್ಟಣದ ಹಿಂದು ರುದ್ರಭೂಮಿಯಲ್ಲಿ ಮಕ್ಕಳು ಮಮ್ಮೊಕ್ಕಳು, ಗಿರಿಮಕ್ಕಳು, ಅಳಿಯಂದಿರು, ಸೊಸೆಯಂದಿರು ಸಮಾಜ ಬಂಧುಗಳು ಹಾಗೂ ಅಪಾರ ಬಂಧು ಬಳಗದ ಸಮ್ಮುಖದಲ್ಲಿ ಮಡಿವಾಳ ಸಂಪ್ರದಾಯದ ಪ್ರಕಾರ ನೆರವೇರಿತು.

### ಗುತ್ತಿಗೆ ಆಧಾರ ಮೇಲೆ ಮಹಿಳಾ ವೈದ್ಯಾಧಿಕಾರಿಗಳಿಂದ ಅರ್ಜಿ ಆಹ್ವಾನ

» ದಾವಣಗೆರೆ

ದಾವಣಗೆರೆ ಶಿವಗಂಗೋತ್ರಿ ವಿಶ್ವವಿದ್ಯಾಲಯದ ಆರೋಗ್ಯ ಕೇಂದ್ರಕ್ಕೆ ಮಹಿಳಾ ವೈದ್ಯಾಧಿಕಾರಿಗಳಾಗಿ (ಅರೆಕಾಲಿಕ) ಸಂಚಿತ ವೇತನದ ಆಧಾರದ ಮೇರೆಗೆ ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿದಾರರು ಎಂ.ಬಿ.ಬಿ.ಎಸ್, ಬಿ.ಎ.ಎಂ.ಎಸ್, ಬಿ.ಹೆಚ್.ಎಂ.ಎಸ್, ಪದವಿ ಪಡೆದಿರಬೇಕು. ಕನಿಷ್ಠ 3 ವರ್ಷ ಅನುಭವವಿರುವ ಮಹಿಳಾ ವೈದ್ಯಾಧಿಕಾರಿಗಳಾಗಿ ಸೇವೆ ಸಲ್ಲಿಸಿರಬೇಕು. ಅರ್ಜಿ ಸಲ್ಲಿಸಲು ಜ.22 ಕೊನೆಯ ದಿನ. ಅರ್ಜಿಯನ್ನು ವೆಬ್‌ಸೈಟ್ www.davangereuniversity.ac.in ನಲ್ಲಿ ಪಡೆದು ಕುಲಸಚಿವರು ದಾವಣಗೆರೆ ವಿಶ್ವವಿದ್ಯಾನಿಲಯ ಶಿವಗಂಗೋತ್ರಿ ದಾವಣಗೆರೆ –577007 ಇಲ್ಲಿಗೆ ಸಲ್ಲಿಸಬೇಕು ಎಂದು ವಿಶ್ವವಿದ್ಯಾನಿಲಯದ ಕುಲಸಚಿವರು ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂದರ್ಭದಲ್ಲಿ ನೀಡುವ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಅಲ್ಲಿಸುವ ಅವಧಿಯನ್ನು ಜ.20 ರವರೆಗೆ ವಿಸ್ತರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ಜ.26 ರಂದು ಪ್ಲಾಸ್ಟಿಕ್ ರಾಷ್ಟ್ರಧ್ವಜಗಳ ನಿಷೇಧ

» ದಾವಣಗೆರೆ

ಗಣರಾಜ್ಯೋತ್ಸವದಲ್ಲಿ ಪ್ಲಾಸ್ಟಿಕ್ ರಾಷ್ಟ್ರಧ್ವಜಗಳ ಮಾರಾಟ ಹಾಗೂ ಬಳಕೆ ನಿಷೇಧಿಸಲಾಗಿದೆ ಎಂದು ಪರಿಸರ ಅಧಿಕಾರಿ ಡಾ.ಹೆಚ್.ಲಕ್ಷ್ಮೀಕಾಂತ್ ತಿಳಿಸಿದ್ದಾರೆ ಪರಿಸರ ಸ್ನೇಹಿಯಾಗಿ ಆಚರಿಸಲು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕೋರಲಾಗಿದೆ. ಪ್ಲಾಸ್ಟಿಕ್ ಧ್ವಜಗಳನ್ನು ಮಾರಾಟ ಮಾಡುವಂತಹ ಅಂಗಡಿಗಳು ಕಂಡುಬಂದರೆ ಅಂತಹವರ ವಿರುದ್ಧ ಪ್ಲಾಸ್ಟಿಕ್ ಅಧಿನಿಯಮ–2016 ಹಾಗೂ ಪರಿಸರ ಸಂರಕ್ಷಣಾ ಕಾಯ್ದೆ, 1986ರಡಿಯಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

### ಬೇಟಿ ಬಚಾವೋ, ಬೇಟಿ ಪಡಾವೋ ಕಾರ್ಯಕ್ರಮದಡಿ ರಂಗೋಲಿ ಸ್ಪರ್ಧೆ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಬೇಟಿ ಬಚಾವೋ, ಬೇಟಿ ಪಡಾವೋ, ಕಾರ್ಯಕ್ರಮದಡಿಯಲ್ಲಿ ಹೆಣ್ಣು ಮಕ್ಕಳ ರಕ್ಷಣೆ ಮತ್ತು ಶಿಕ್ಷಣ ಪ್ರೋತ್ಸಾಹಿಸುವ ವಿಷಯದ ಕುರಿತು ಅರಿವು ಮೂಡಿಸಲು ಫೆ.3 ರಂದು ಮಧ್ಯಾಹ್ನ 2. ಗಂಟೆಗೆ ನಗರದ ಗಾಜಿನ ಮನೆಯಲ್ಲಿ ರಂಗೋಲಿ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ.

ಆಸಕ್ತ ಮಹಿಳೆಯರು ಸ್ಪರ್ಧೆಯಲ್ಲಿ ಭಾಗವಹಿಸಿ ಮೇಲಿನ ವಿಷಯಕ್ಕನುಸಾರವಾಗಿ ಸೂಕ್ತ ತಲೆಬರಹ, ಸ್ಲೋಗನ್‌ನೊಂದಿಗೆ ರಂಗೋಲಿ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಚಿಸುವ ಅಭ್ಯರ್ಥಿಗಳು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸರ್ಕಾರಿ ಬಾಲಕರ ಬಾಲಮಂದಿರ ಕಟ್ಟಡ, 14ನೇ ಮುಖ್ಯರಸ್ತೆ, ಕುವೆಂಪುನಗರ, ಎಂ.ಸಿ.ಸಿ 'ಬಿ' ಬ್ಲಾಕ್, ದಾವಣಗೆರೆ ದೂ.ಸಂ:08192–264056 ಕಚೇರಿಯಲ್ಲಿ ಜ.31 ರೊಳಗಾಗಿ ನೊಂದಾಯಿಸಿಕೊಳ್ಳಲು ಉಪ ನಿರ್ದೇಶಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

# ಪ್ರತಿಯೊಂದು ಮನೆಮನೆಗೂ ಸಹ ಸ್ಕೌಟ್ ಅಂಡ್ ಗೈಡ್ಸ್ ತಲುಪಬೇಕು: ಸಿಂಧ್ಯಾ

» ಹೊಸದುರ್ಗ

ಸ್ಕೌಟ್ಸ್ ಮತ್ತು ಗೈಡ್ಸ್ ಸೇರ್ಪಡೆಯಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನದ ಜತೆಗೆ ಕಲಿಕೆಯಲ್ಲೂ ಪ್ರಗತಿ ಸಾಧಿಸಲು ಸಾಧ್ಯ ಸ್ಕೌಟ್ಸ್ ಮತ್ತು ಗೈಡ್ಸ್‌ನಿಂದ ಮಕ್ಕಳಲ್ಲಿ ಪರಿಸರ ಪ್ರಜ್ಞೆ, ಸಂಸ್ಕೃತಿಯ ಅರಿವನ್ನು ಮೂಡಿಸುವ ಕೆಲಸವಾಗುತ್ತಿದೆ ಎಂದು ಸ್ಕೌಟ್ ಅಂಡ್ ಗೈಡ್ ರಾಜ್ಯ ಘಟಕದ ಅಧ್ಯಕ್ಷ ಪಿ ಜಿ ಆರ್ ಸಿಂಧ್ಯಾ ತಿಳಿಸಿದರು.

ಪಟ್ಟಣದ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಭಾರತ್ ಸ್ಕೌಟ್ಸ್ ಅಂಡ್ ಗೈಡ್ ರಾಜ್ಯ, ಜಿಲ್ಲಾ, ತಾಲೂಕು ಘಟಕ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯ ಆಶ್ರಯದಲ್ಲಿ ಆಯೋಜಿಸಿದ್ದ ಭಾರತ್ ಸ್ಕೌಟ್ಸ್ ಅಂಡ್ ಗೈಡ್ ಘಟಕ ನವೀಕರಣ ಮತ್ತು ಪನ:ಶ್ಚೇತನ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ಸರ್ಕಾರದ ಮೂಲ ಉದ್ದೇಶ ಪ್ರತಿಯೊಂದು ಮನೆಮನೆಗೂ ಸಹ ಸ್ಕೌಟ್ ಅಂಡ್ ಗೈಡ್ಸ್ ತಲುಪಬೇಕು. ಪ್ರತಿಯೊಂದು ಶಾಲಾ ಕಾಲೇಜುಗಳಲ್ಲಿ ಸ್ಕೌಟ್ ದಳಗಳು ರಚನೆಯಾಗುವುದರ ಮುಖಾಂತರ ಸ್ಕೌಟ್ ಸೇವೆ ಎಲ್ಲರನ್ನೂ ತಲುಪಬೇಕು ಎಂದರು.ಶಾಸಕ ಬಿ ಜಿ ಗೋವಿಂದಪ್ಪ ಮಾತನಾಡಿ ದೇಶದ ಮಕ್ಕಳು ಆದರ್ಶ ನಾಗರೀಕರಾಗಲು ಶಿಸ್ತು ಮುಖ್ಯ ಮಕ್ಕಳಿಗೆ ಸಮವಸ್ತ್ರವಿರುತ್ತದೆ. ಇದರಿಂದ ಜೀವನಲ್ಲಿ ಸಮಯಪ್ರಜ್ಞೆ ಬೆಳೆಯುತ್ತದೆಯಲ್ಲಿದೆ ಗುರು–ಹಿರಿಯರನ್ನು ಗೌರವಿಸುವ ಸಂಸ್ಕೃತಿ ಕಲಿಯಬಹುದು ಎಂದು ಹೇಳಿದರು.ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸೈಯದ್ ಮೋಸಿನ್ ಮಾತನಾಡಿಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳುವುದರಿಂದ ಸೇವಾ ಮನೋಭಾವನೆ ವೃದ್ಧಿಸುವ ಜತೆಯಲ್ಲಿ ನಾಯಕತ್ವ ಗುಣ ಬೆಳೆಯುತ್ತದೆ ಎಂಬ ಆಶಯವನ್ನ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಬಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಪ್ರಕಾಶ್ ಯುವಜನ ತಾಲ್ಲೂಕು ಕ್ರೀಡಾಧಿಕಾರಿ ಮಹಾಂತೇಶ್ , ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಂಜುನಾಥ್, ಸಂಘದ ಅಧ್ಯಕ್ಷ ಪ್ರಶಾಂತ್,ಪ್ರಾ,ಶಾ,ಶಿ ಸಂಘದ ಅಧ್ಯಕೆ ಮಂಜುಳಾಕ್ಷಿ ಭಾಗವಹಿಸಿದ್ದರು.



ಪಟ್ಟಣದ ಪಟ್ಟಣದ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಭಾರತ್ ಸ್ಕೌಟ್ಸ್ ಅಂಡ್ ಗೈಡ್ ಘಟಕ ನವೀಕರಣ ಮತ್ತು ಪನ:ಶ್ಚೇತನ ಕಾರ್ಯಾಗಾರವನ್ನು ಎಂದು ಸ್ಕೌಟ್ ಅಂಡ್ ಗೈಡ್ ರಾಜ್ಯ ಘಟಕದ ಅಧ್ಯಕ್ಷ ಪಿ ಜಿ ಆರ್ ಸಿಂಧ್ಯಾ ಉದ್ಘಾಟಿಸಿದರು.

## ಮಕರ ಸಂಕ್ರಾಂತಿ ಪ್ರಯುಕ್ತ ರಂಗೋಲಿ ಸ್ಪರ್ಧೆ

» ಹಿರಿಯೂರು

ಮಕರ ಸಂಕ್ರಾಂತಿ ಹಬ್ಬದ ಪ್ರಯುಕ್ತ ಹಿರಿಯೂರಿನ ಶ್ರೀನಿವಾಸನಗರದ ಹಾಗೂ ಭೀಮನ ಬಂಡೆ ಬಳಿ ಇರುವ ಯಾಜ್ಞ ವಲ್ಕ್ಯ ಶಾಲೆಯ 6 ರಿಂದ 9 ನೇ ತರಗತಿಯ ವಿದ್ಯಾರ್ಥಿಗಳಿಗೆ ರಂಗೋಲಿ ಸ್ಪರ್ಧೆ ಯನ್ನು ಏರ್ಪಡಿಸಲಾಗಿತ್ತು. ಯಾಜ್ಞವಲ್ಕ್ಯ ಸಿಬಿಎ□□□ ಸ್ಕೂಲ್ ಭೀಮನಬಂಡೆ & ಯಾಜ್ಞವಲ್ಕ್ಯ ಐಸಿಎ□□□ಸ್ಕೂಲ್ ಶ್ರೀನಿವಾಸನಗರ ಎರಡೂ ಶಾಲೆಯ ಮಕ್ಕಳನ್ನು 23 ತಂಡಗಳನ್ನಾಗಿ ವಿಭಾಗಿಸಿ ಸ್ಪರ್ಧೆಯನ್ನು ನಡೆಸಲಾಯಿತು. ಎಲ್ಲಾ ಮಕ್ಕಳು ಅತ್ಯುತ್ಸಾಹದಿಂದ ಪಾಲ್ಗೊಂಡಿದ್ದರು.ಚಿತ್ರಕಲಾ ಶಿಕ್ಷಕರಾದ ಶ್ರೀಮತಿ ಸೌಮ್ಯ ರವರ ಮಾರ್ಗದರ್ಶನದಲ್ಲಿ ಮಕ್ಕಳು ಚಿತ್ರಿಸಿದ ರಂಗೋಲಿಗಳು ಕಣ್ಮನ ಸೆಳೆಯುವಂತಿದ್ದವು. ಸ್ಪರ್ಧೆ ಸುಗಮವಾಗಿ



ನೆರವೇರಿತು.ಶಾಲೆಯ ಚೇರ್ಮನ್ ಟಿ ಸುರೇಶ್ ಉಪ ಚೇರ್ಮನ್ ಡಾ. ರಾಧಿಕಾ ಪ್ರಾಂಶುಪಾಲರಾದ ಯೋಗೇಶ್ ಶಿಕ್ಷಕ ವೃಂದದವರಾದ ಸುರೇಶ್ ರಾಧಿಕಾ ಶ್ರೀಸಾನ್ ಶ್ರೀನಿವಾಸ್ ಯೋಗೇಶ್ ಮಂಜುನಾಥ್ ಮಲ್ಲಿಕಾರ್ಜುನ್ ವಿಶಾಲ ಮತ್ತು ಶಂಕರ್ ಪ್ರೋತ್ಸಾಹಿಸಿದರು.

## ಕಾನೂನು ಸೇವಾ ಪ್ರಾಧಿಕಾರದ ಕಾರ್ಯದರ್ಶಿಗಳಿಂದ ದಿಢೀರ್ ಹಾಸ್ಟೆಲ್‌ಗೆ ಭೇಟಿ ಕುಂದು ಕೊರತೆ ಅನಾವರಣ, ಸ್ವಚ್ಚತೆಗೆ ಸೂಚನೆ




» ದಾವಣಗೆರೆ

ದಾವಣಗೆರೆ ನಗರದ ವರ್ತುಲ ರಸ್ತೆಯಲ್ಲಿನ ಹಾಸ್ಟೆಲ್‌ಗೆ ಮಂಗಳವಾರ ಜ.9 ರಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಾರ್ಯದರ್ಶಿಯವರಾದ ಮಹಾವೀರ ಮಾ.ಕರೆಣ್ಣವರ ಅವರು ಭೇಟಿ ನೀಡಿದಾಗ ಅಲ್ಲಿನ ಕುಂದುಕೊರತೆಗಳ ಬಗ್ಗೆ ವಿದ್ಯಾರ್ಥಿಗಳು ತಿಳಿಸಿದ್ದು ಇದು ಸಮಾಜ ಕಲ್ಯಾಣ ಇಲಾಖೆ ಮೆಟ್ರಿಕ್ ನಂತರದ ವಿದ್ಯಾರ್ಥಿನಿಯರ ಹಾಸ್ಟೆಲ್ ಆಗಿರುತ್ತದೆ. ಜ.9 ರಂದು ಕಳುಹಿಸಿದ ಪ್ರಕಟಣೆಯಲ್ಲಿ ಬಿ.ಸಿ.ಎಂ. ಇಲಾಖೆ ಹಾಸ್ಟೆಲ್ ಎಂದು ನಮೂದಾಗಿದ್ದು ಇದು ಸಮಾಜ ಕಲ್ಯಾಣ ಇಲಾಖೆ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯವಾಗಿರುತ್ತದೆ. ಈ ನಿಯಲದ ವಿದ್ಯಾರ್ಥಿಗಳು ಹಾಸ್ಟೆಲ್‌ನಲ್ಲಿರುವ ಕುಂದುಕೊರತೆಗಳ ಬಗ್ಗೆ ನ್ಯಾಯಾಧೀಶರೊಂದಿಗೆ ಮಾತನಾಡಿದ್ದರು. ಈ ಬಗ್ಗೆ ನ್ಯಾಯಾಧೀಶರು ಸಂದರ್ಶನ ಪುಸ್ತಕದಲ್ಲಿ ನಮೂದು ಮಾಡಿ ಅನುಪಾಲನಾ ವರದಿ ನೀಡಲು ಸೂಚನೆ ನೀಡಿರುತ್ತಾರೆ.

## ಬಿಎಸ್‌ಎನ್‌ಎಲ್ ಸ್ಥಿರ ದೂರವಾಣಿ ಸೇವೆ ಒದಗಿಸುವಲ್ಲಿ ನ್ಯೂನ್ಯತೆ, ಬಿಎಸ್‌ಎನ್‌ಎಲ್‌ನಿಂದ ಪರಿಹಾರ ನೀಡಲು ಆದೇಶ

» ದಾವಣಗೆರೆ

ಜಿಲ್ಲಾಗ್ರಾಹಕರವ್ಯಾಜ್ಯಗಳಪರಿಹಾರಆಯೋಗವು ಬಿಎಸ್‌ಎನ್‌ಎಲ್ ಸ್ಥಿರ ದೂರವಾಣಿ ಸೇವೆಯನ್ನು ಸರಿಯಾಗಿ ನೀಡದಿರುವ ಕಾರಣಕ್ಕೆ ಮಾನಸಿಕ ವ್ಯಥೆಗೆ ರೂ. 10 ಸಾವಿರ, ಪರಿಹಾರವಾಗಿ ರೂ.5 ಸಾವಿರ ಹಾಗೂ ಠೇವಣಿಗೆ ಶೇ 18 ರ ವಾರ್ಷಿಕ ಬಡ್ಡಿದರದಲ್ಲಿ 2020 ರಿಂದ ಮರು ಸಂದಾಯ ಮಾಡಲು ಆದೇಶಿಸಿದೆ.

ದಾವಣಗೆರೆ ನಗರದ ತರಳಬಾಳು ಬಡಾವಣೆ 8 ಕ್ರಾಸ್ ಕಲ್ಲೇಶ್ವರ ನಿಲಯದಲ್ಲಿ ವಾಸಿಸುವ ನಿವೃತ್ತ ಶಿಕ್ಷಕರಾದ ಎ.ಜಿ.ವೀರೇಶ್ ಅವರು ಬಿ.ಎಸ್.ಎನ್.ಎಲ್ ಸ್ಥಿರ ದೂರವಾಣಿ 222544 ಹೊಂದಿದ್ದು ಇದು ಪದೇ ಪದೆ ದುರಸ್ಥಿಗೆ ಒಳಗಾಗಿ ಸಕಾಲದಲ್ಲಿ ಸೇವೆ ಸಿಗದ ಕಾರಣ ಹಲವು ಭಾರಿ ಬಿಎಸ್‌ಎನ್‌ಎಲ್ ಕಚೇರಿಗೆ ದೂರು ನೀಡಿದ್ದರೂ ಸಹ ಗುಣಮಟ್ಟದ ಸೇವೆ ಸಿಗದ ಕಾರಣ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಈ ದೂರವಾಣಿ 2020–23ರ ಅವಧಿಯಲ್ಲಿ ಸರಿಯಾಗಿ ಸೇವೆಯನ್ನು ನೀಡಿರುವುದಿಲ್ಲವೆಂದು ಹಾಗೂ ಆಗಲೋ–ಈಗಲೋ ಒಮ್ಮೊಮ್ಮೆ ದೂರವಾಣಿ ಕರೆಗಳು ಬರುತ್ತಿದ್ದರೂ ಕೂಡ ಒಳಬರುವ ಕರೆಗಳು ವ್ಯವಸ್ಥಿತವಾಗಿ ಕೇಳಿಬರುತ್ತಿರಲ್ಲಿಲ್ಲ. ಈ ಬಗ್ಗೆ ಹಲವಾರು ಬಾರಿ ಮೌಖಿಕವಾಗಿ ಮತ್ತು ಲಿಖಿತವಾಗಿ ಬಿಎಸ್‌ಎನ್‌ಎಲ್‌ಗೆ ಮನವಿ ಮಾಡಿದರೂ ಪರಿಸ್ಥಿತಿ ಸುಧಾರಣೆ ಕಾಣಲಿಲ್ಲ, ಕಚೇರಿಗೆ ಭೇಟಿ ನೀಡಿ ದೂರು ನೀಡಲು ಹೋದಾಗ ಒಂದು ಟೇಬಲ್‌ನಿಂದ ಇನ್ನೊಂದು ಟೇಬಲ್‌ಗೆ ವರ್ಗಾಹಿಸಿ ಯಾವೊಬ್ಬ ಅಧಿಕಾರಿಯು ತಮ್ಮ ಅಹವಾಲಿಗೆ ಕಿವಿಗೊಡಲಿಲ್ಲ.

ಬಿಎಸ್‌ಎನ್‌ಎಲ್ ಕಾಪರ್ ಮಾರ್ಗವಿದ್ದುದರಿಂದ ಪದೇ ಪದೇ ಮಾರ್ಗ ಕಡಿತವಾಗುತ್ತದೆ. ಇದನ್ನು ಫೈಬರ್ ಮಾರ್ಗಕ್ಕೆ ಬದಲಾಯಿಸಿಕೊಳ್ಳಬೇಕೆಂದು ನಿವೃತ್ತ ಶಿಕ್ಷಕರಾದ ಎ.ಜಿ.ವೀರೇಶ್ ರವರಿಗೆ ಹಲವು ಭಾರಿ ಮೌಖಿಕ ಹಾಗೂ ಪತ್ರ ಮುಖೇನ ತಿಳಿಸಲಾಗಿದೆ. ಈ ಬಡಾವಣೆಯಲ್ಲಿ ಎಲ್ಲರೂ ಫೈಬರ್ ಮಾರ್ಗಕ್ಕೆ ಬದದಲಾಯಿಸಿಕೊಂಡಿದ್ದು ಅರ್ಜಿದಾರರು ಮಾತ್ರ ಕಾಪರ್ ಲೈನ್ ಹೊಂದಿದ್ದು ದುರಸ್ಥಿ ದುಬಾರಿಯಾಗಿರುತ್ತದೆ ಎಂದು ಬಿಎಸ್‌ಎನ್‌ಎಲ್ ಸಮರ್ಥಿಸಿಕೊಂಡಿದೆ.

ಆಯೋಗವು ಗ್ರಾಹಕ ಸಂರಕ್ಷಣಾ ಅಧಿನಿಯಮ 2019ರ ಕಲಂ–35ರ ಅಡಿಯಲ್ಲಿ ಸಲ್ಲಿಸಿರುವ ದೂರನ್ನು ಭಾಗಶಃ ಪುರಸ್ಕರಿಸಿ ಸೇವಾ ನ್ಯೂನ್ಯತೆಯನ್ನು ಪರಿಗಣಿಸಿ ಗ್ರಾಹಕರಿಗೆ 30 ದಿನಗಳೊಳಗಾಗಿ ಪರಿಹಾರದ ಮೊತ್ತವನ್ನು ಪಾವತಿಸುವ ಜೊತೆಗೆ ಒಳ ಹೋಗುವ ಮತ್ತು ಹೊರ ಹೋಗುವ ಕರೆಗಳಿಗೆ ಯಾವುದೇ ಅಡೆತಡೆ ಇಲ್ಲದೆ ಸೇವೆ ಒದಗಿಸಲು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರದ ಆಯೋಗದ ಅಧ್ಯಕ್ಷರಾದ ಮಹಂತೇಶ ಈರಪ್ಪ ಶಿಗ್ಲಿ ಮತ್ತು ಮಹಿಳಾ ಸದಸ್ಯೆ ಗೀತಾ.ಬಿ.ಯು ಇವರು ಆದೇಶಿಸಿದ್ದಾರೆ.

## ರಾಷ್ಟ್ರೀಯ ಮತದಾರರ ದಿನಾಚರಣೆ; ರಾಜ್ಯ ಮಟ್ಟದ ಪ್ರಬಂಧ, ಚಿತ್ರಕಲಾ ಸ್ಪರ್ಧೆಯಲ್ಲಿ ಜಿಲ್ಲೆಯ ವಿದ್ಯಾರ್ಥಿಗಳು ಆಯ್ಕೆ

ದಾವಣಗೆರೆ: 14ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ "ಮತದಾನಕ್ಕಿಂತ ಇನ್ನೊಂದಿಲ್ಲ ನಾನು ಖಚಿತವಾಗಿ ಮತದಾನ ಮಾಡುವೆ" ಎಂಬ ಧ್ಯೇಯವಾಕ್ಯದೊಂದಿಗೆ ವಿದ್ಯಾರ್ಥಿಗಳಿಗೆ ಏರ್ಪಡಿಸಲಾದ ರಾಜ್ಯ ಮಟ್ಟದ ಪ್ರಬಂಧ ಹಾಗೂ ಚಿತ್ರಕಲಾ ಸ್ಪರ್ಧೆಯಲ್ಲಿ ಜಿಲ್ಲೆಯ ವಿದ್ಯಾರ್ಥಿಗಳು ಭಾಗವಹಿಸಿ ಆಯ್ಕೆಯಾಗಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ, ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಅಧ್ಯಕ್ಷರಾದ ಸುರೇಶ್ ಇಟ್ನಾಳ್ ಹಾಗೂ ನೋಡಲ್ ಅಧಿಕಾರಿಗಳು ಅಭಿನಂದಿಸಿದ್ದಾರೆ. ಸಿಂಧು.ಜಿ.ಎನ್ ಗಾನಶ್ರೀ.ಜಿ. ವೀರಭದ್ರಸ್ವಾಮಿ.ಜಿ.ಎಂ ಸ್ಟೆಲ್ಲಾ ಮೇರಿಸ್ ಪ್ರೌಢಶಾಲೆ, ಹೊನ್ನಾಳಿ ಇವರು ಚಿತ್ರಕಲೆ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನವನ್ನು ಪಡೆದಿರುತ್ತಾರೆ.

**ಪ್ರಮುಖ ಸುದ್ದಿ**

# 2022ನೇ ವರ್ಷದ ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

» ಚಿತ್ರದುರ್ಗ

ಕನ್ನಡ ಸಾಹಿತ್ಯ ಅಕಾಡೆಮಿಯು 2022ನೇ ವರ್ಷದ ಪುಸ್ತಕ ಬಹುಮಾನ ಯೋಜನೆಗಾಗಿ ಸಾಹಿತ್ಯದ ವಿವಿಧ ಪ್ರಕಾರಗಳ ಕನ್ನಡ ಪುಸ್ತಕಗಳನ್ನು ಸಲ್ಲಿಸಲು ಅರ್ಜಿ ಅಹ್ವಾನಿಸಲಾಗಿದೆ.

ಪ್ರತಿ ಪ್ರಕಾರದಲ್ಲಿ ವಿರ್ಮಶಕರು ಆಯ್ಕೆಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸುವ ಕೃತಿಗಳು 2022 ರ ಜನವರಿ 1 ರಿಂದ 2022ರ ಡಿಸೆಂಬರ್ 31 ರೊಳಗೆ ಪ್ರಥಮ ಆವೃತಿಯಾಗಿ ಪ್ರಕಟವಾಗುವ ಕೃತಿಗಳಾಗಿರಬೇಕು. ಕೃತಿಯಲ್ಲಿ ಪ್ರಥಮ ಮುದ್ರಣ 2022 ಎಂದು ಮುದ್ರಿತವಾಗಿರಬೇಕು.

ಕಾವ್ಯ (ವಚನಗಳು ಮತ್ತು ಹನಿಗವನಗಳು ಸೇರಿ), ನವಕವಿಗಳ ಪ್ರಥಮ ಕವನ ಸಂಕಲನ (ದೃಢೀಕರಣ ಪತ್ರದೊಂದಿಗೆ), ಕಾವ್ಯ ಹಸ್ತಪ್ರತಿ (ಮೂವತ್ತು ವರ್ಷ ಒಳಗಿನ ಯುವ ಕವಿಗಳ ಅಪ್ರಕಟಿತ ಕವನಸಂಕಲನದ ಹಸ್ತ ಪ್ರತಿಯನ್ನು ಕಳುಹಿಸಿಕೊಡಬೇಕು (ಚಿ.ಶ್ರೀನಿವಾಸರಾಜು ದತ್ತಿನಿಧಿ ಬಹುಮಾನಕ್ಕಾಗಿ), ಕಾದಂಬರಿ ( ಅಕಾಡಮಿ ಪುಸ್ತಕ ಬಹುಮಾನ ಹಾಗೂ ಚದುರಂಗ ದತ್ತಿನಿಧಿ ಬಹುಮಾನಗಳಿಗಾಗಿ), ಸಣ್ಣ ಕಥೆ, ನಾಟಕ, ಲಲಿತ ಪ್ರಬಂಧ (ಹರಟೆ ಮತ್ತು ವಿನೋದ ಸಾಹಿತ್ಯ ಸೇರಿ) ( ಅಕಾಡನಿ ಪುಸ್ತಕ ಬಹುಮಾನ ಹಾಗೂ ವಿ. ಸೀತಾರಾಮಯ್ಯ ಸೋದರಿ ಇಂದಿರ ದತ್ತಿನಿಧಿ ಬಹುಮಾನಕ್ಕಾಗಿ), ಪ್ರವಾಸ ಸಾಹಿತ್ಯ, ಜೀವನ ಚರಿತ್ರೆ/ ಆತ್ಮಕಥೆ ( ಆಕಾಡಮಿ ಪುಸ್ತಕ ಬಹುಮಾನ ಹಾಗೂ ಸಿಂಪಿ ಲಿಂಗಣ್ಣ ದತ್ತಿನಿಧಿ ಬಹುಮಾನಗಳಿಗಾಗಿ), ಗ್ರಂಥ ಸಂಪಾದನೆ ( ಪ್ರಾಚೀನ ಕೃತಿಗಳ ಸಂಪಾದನೆ), ಮಕ್ಕಳ ಸಾಹಿತ್ಯ, ವಿಜ್ಞಾನ ಸಾಹಿತ್ಯ ( ಭೌತ, ರಸಾಯನ, ಗಣಿತ, ಪ್ರಾಣಿ, ಸಸ್ಯ, ಇಂಜಿನಿಯರಿಂಗ್ , ವೈದ್ಯ, ಭೂ, ಖಗೋಳ, ಗೃಹ ವಿಜ್ಞಾನ ಪರಿಸರ), ಮಾನವಿಕ (ಜಾನಪದ, ಇತಿಹಾಸ, ರಾಜಕೀಯ ಶಾಸ್ತ್ರ, ಸಮಾಜ ಶಾಸ್ತ್ರ, ಮಾನವ ಶಾಸ್ತ್ರ, ಮನಃಶಾಸ್ತ್ರ, ಭಾಷ ಶಾಸ್ತ್ರ, ಶಿಕ್ಷಣ, ವಾಣಿಜ್ಯ, ಕಾನೂನು, ಗ್ರಂಥಭಂಡಾರ ವಿಜ್ಞಾನ, ಸಮೂಹ ಸಂವಹನ, ಧಾರ್ಮಿಕ, ದಾರ್ಶನಿಕ), ಸಂಶೋಧನೆ( ಕನ್ನಡ ಭಾಷೆ ಸಾಹಿತ್ಯ ಮತ್ತು ಸಂಸ್ಕೃತಿಗಳಿಗೆ ಸಂಬಂಧಿಸಿದ ಸಂಶೋಧನೆ), ವೈಚಾರಿಕ/ ಅಂಕಣ ಬರಹ (ಅಕಾಡಮಿ ಪುಸ್ತಕ ಬಹುಮಾನ ಹಾಗೂ ಬಿ.ವಿ ವೀರಭದ್ರಪ್ಪ ದತ್ತಿನಿಧಿ ಬಹುಮಾನಗಳಿಗಾಗಿ), ಅನುವಾದ –1( ಇಂಗ್ಲಿಷ್ ಸೇರಿದಂತೆ ಭಾರತೀಯ ಭಾಷಯಿಂದ ಕನ್ನಡಕ್ಕೆ ಅನುವಾದಗೊಂಡ( ಸೃಜನ/ಸೃಜನೇತರ ಕೃತಿಗಳು (ಅಕಾಡಮಿ ಪುಸ್ತಕ ಬಹುಮಾನ ಹಾಗೂ ಎಲ್.ಗುಂಡಪ್ಪ ಮತ್ತು ಶಾರದಮ್ಮ ದತ್ತಿನಿಧಿ ಬಹುಮಾನಗಳಿಗಾಗಿ), ಅನುವಾದ–2 (ಕನ್ನಡದಿಂದ ಅನ್ಯಭಾಷೆಗಳಿಗೆ ಅನುವಾದಗೊಂಡ ಸೃಜನ/ ಸೃಜನೇತರ ಕೃತಿ), ಲೇಖಕರ ಮೊದಲ ಸ್ವತಂತ್ರ ಕೃತಿ (2022 ರಲ್ಲಿ ಮುದ್ರಣಗೊಂಡ ಮೊದಲ ಸ್ವತಂತ್ರ ಕೃತಿ ಖಾತರಿಪಡಿಸಲು ದೃಢೀಕರಣ ಪತ್ರ ಲಗತ್ತಿಸಬೇಕು)( ಅಕಾಡಮಿ ಪುಸ್ತಕ ಬಹುಮಾನ ಹಾಗೂ ಮಧುರಚೆನ್ನ ದತ್ತಿನಿಧಿ ಬಹುಮಾನಗಳಿಗಾಗಿ). ಕನ್ನಡದಿಂದ ಇಂಗ್ಲಿಷ್‌ಗೆ ಅನುವಾದ (ಅಮೆರಿಕನ್ನಡ ದತ್ತಿನಿಧಿ ಬಹುಮಾನಕ್ಕಾಗಿ)ದಾಸ ಸಾಹಿತ್ಯ(ದಾಸ ಸಾಹಿತ್ಯ ಕುರಿತು ಸೃಜನ/ಸೃಜನೇತರ ಕೃತಿಗಳು)(ಶ್ರೀಮತಿ ಜಲಜಾ ಶ್ರೀಪತಿ ಆಚಾರ್ಯ ಗಂಗೂರ್ ದತ್ತಿನಿಧಿ ಬಹುಮಾನಕ್ಕಾಗಿ). ಸಂಕೀರ್ಣ (ಮೇಲಿನ ಯಾವುದೇ ಪ್ರಕಾರಕ್ಕೆ ಹೊಂದಿಕೊಳ್ಳದ ವಿಶಿಷ್ಟ ಕೃತಿಗಳು).

ಬಹುಮಾನಕ್ಕಾಗಿ ಪರಿಗಣಿಸಲ್ಪಡದ ಕೃತಿಗಳು: ಮರುಮುದ್ರಣವಾದ ಪುಸ್ತಕಗಳು, ಪಿಎಚ್‌ಡಿ. ಪದವಿಗಾಗಿ ಸಿದ್ಧಪಡಿಸಿದ ಸಂಶೋಧನಾ ಗ್ರಂಥಗಳು, ಪಠ್ಯ ಪುಸ್ತಕಗಳು, ಅಕಾಡೆಮಿಯ ಗೌರವ ಪ್ರಶಸ್ತಿ ಪುರಸ್ಕೃತ ಸಾಹಿತಿಗಳ ಕೃತಿಗಳು, ಈಗಾಗಲೇ ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಒಟ್ಟಾರೆ ಮೂರು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳು, ಒಂದು ಪ್ರಕಾರದಲ್ಲಿ ಒಂದು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳನ್ನು ಮತ್ತದೇ ಪ್ರಕಾರದಲ್ಲಿ ಮುಂದಿನ ಮೂರು ವರ್ಷದವರೆಗೆ ಪರಿಗಣಿಸುವುದಿಲ್ಲ, ಒಬ್ಬ ಲೇಖಕರಿಗೆ ಮೂರು ಬಾರಿ ಬೇರೆ ಬೇರೆ ಪ್ರಕಾರಗಳಲ್ಲಿ ಬಹುಮಾನ ಪಡೆಯುವ ಅವಕಾಶವಿದೆ. ಆಸಕ್ತರು ಪುಸ್ತಕಗಳ ತಲಾ 4 ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ ಬೆಂಗಳೂರು–560002 ಇವರಿಗೆ ರಿಜಿಸ್ಟರ್ಡ್ ಅಂಚೆ ಅಥವಾ ಕೊರಿಯರ್ ಮೂಲಕ ಇಲ್ಲವೇ ಖುದ್ದಾಗಿ 2024ರ ಫೆಬ್ರವರಿ 20 ರೊಳಗೆ ತಲುಪಿಸಬೇಕು.ಬಹುಮಾನಕ್ಕಾಗಿ ಕಳುಹಿಸುವ ಕೃತಿಯ ಮೇಲೆ ತಿಳಿಸಿದ ಪ್ರಕಾರಗಳಲ್ಲಿ ಯಾವ ಸಾಹಿತ್ಯ ಪ್ರಕಾರಕ್ಕೆ ಸೇರುತ್ತದೆ ಎನ್ನುವುದನ್ನು ಸ್ಪಷ್ಟವಾಗಿ ಪುಸ್ತಕದ ಶೀರ್ಷಿಕೆ ಪುಟದಲ್ಲಿ ಬರೆದಿರಬೇಕು ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಎನ್ ಕರಿಯಪ್ಪ ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T